ಸಂಪುಟ : 11 ಸಂಚಿಕೆ: 103 ಪುಟ : 4+2 ಬೆಲೆ: 3.00 ರವಿವಾರ ಮೇ 24 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 103 Pages : 4+2 Price : 3.00 Sunday May 24 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ರಾಜ್ಯ ಸಂಘಟನಾ ಕಾರ್ಯದರ್ಶಿಯಾಗಿ ಹವಳದ ನೇಮಕ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಸರಕಾರಿ ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ ಅವರನ್ನು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅವರು ನೇಮಕಾತಿ ಪತ್ರ ನೀಡಿ ಹವಳದ ಅವರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ರಾಜ್ಯ ಸರಕಾರಿ ನೌಕರರ ಉಪಾಧ್ಯಕ್ಷರು ಹಾಗೂ ಜಿಲ್ಲಾ ಅಧ್ಯಕ್ಷ ಬಸವರಾಜ ಬಳ್ಳಾರಿ ಇದ್ದರು.

ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷರಾಗಿ ಗುರುರಾಜ ಹವಳದ ಅವರು ಉತ್ಸಾಹದಿಂದ ಸಂಘಟನಾ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದು, ನೌಕರರ ಸಮಸ್ಯೆಗಳ ಪರಿಹಾರಕ್ಕಾಗಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಅವರ ಸೇವೆಯನ್ನು ಪರಿಗಣಿಸಿ ರಾಜ್ಯ ಮಟ್ಟದ ಜವಾಬ್ದಾರಿ ನೀಡಿರುವುದಕ್ಕೆ ತಾಲೂಕು ನೌಕರರ ಸಂಘದ ಪದಾಧಿಕಾರಿಗಳು ಹಾಗೂ ನೌಕರರು ಹರ್ಷ ವ್ಯಕ್ತಪಡಿಸಿದ್ದಾರೆ.

ಗುರುರಾಜ ಹವಳದ ಅವರ ನೇಮಕಕ್ಕೆ ಬಿ.ಎಸ್. ಹರ್ಲಾಪೂರ, ಎಂ.ಎ. ನಧಾಫ್, ಎಂ.ಡಿ. ವಾರದ, ಬಸವರಾಜ ಯರಗುಪ್ಪಿ, ಡಿ.ಎಚ್. ಪಾಟೀಲ, ಎಲ್. ಎನ್. ನಂದೆಣ್ಣವರ, ಎಂ.ಎಸ್. ಹಿರೇಮಠ, ಚಂದ್ರು ನೇಕಾರ, ಡಿ.ಡಿ. ಲಮಾಣಿ ಸೇರಿದಂತೆ ತಾಲೂಕು ಸರಕಾರಿ ನೌಕರರ ಸಂಘದ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದ್ದಾರೆ.

## “ಅಂಬೇಡ್ಕರ್ ಪ್ರತಿಮೆ ಅನಾವರಣ ಜೂ. 7ಕ್ಕೆ ಮುಂದೂಡಿಕೆ”

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಅಬ್ಬಿಗೇರಿ ಗ್ರಾಮದಲ್ಲಿ ಮೇ 24ರಂದು ನಡೆಯಬೇಕಿದ್ದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆ ಅನಾವರಣ ಕಾರ್ಯಕ್ರಮವನ್ನು ಕೆಲ ಅನಿವಾರ್ಯ ಕಾರಣಗಳಿಂದ ಜೂನ್ 7ಕ್ಕೆ ಮುಂದೂಡಲಾಗಿದೆ.

ಜೂನ್ 7ರಂದು ಪೂರ್ವನಿಗದಿಯಂತೆ ಪ್ರತಿಮೆ ಅನಾವರಣ ಕಾರ್ಯಕ್ರಮವನ್ನು ಅದ್ದೂರಿಯಾಗಿ ನಡೆಸಲಾಗುವುದು ಎಂದು ರೋಣ ತಾಲೂಕು ದಲಿತ ಮುಖಂಡ ಮೌನೇಶ ಹಾದಿಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಾಧ್ಯಮ ವರದಿ ಬಳಿಕ ಗಂಗಿಮಡಿಯಲ್ಲಿ ಮರು ಆರಂಭವಾದ ಕಾಳಜಿ ಕೇಂದ್ರ

# ಬೀದಿಪಾಲಾದ ಸಂತ್ರಸ್ತರಿಗೆ ಮತ್ತೆ ಆಶ್ರಯ!

■ವಿಜಯಸಾಕ್ಷಿ ಸುದ್ದಿ, ಗದಗ

ಮಳೆ ಹಾಗೂ ಬಿರುಗಾಳಿಗೆ ತಗಡಿನ ಶೆಡ್‌ಗಳು ಹಾರಿ ಹೋಗಿ ಸಂಕಷ್ಟಕ್ಕೆ ಸಿಲುಕಿದ್ದ ಗಂಗಿಮಡಿ ನಿವಾಸಿಗಳಿಗೆ ತೆರೆಯಲಾಗಿದ್ದ ಕಾಳಜಿ ಕೇಂದ್ರವನ್ನು ಏಕಾಏಕಿ ಬಂದ್ ಮಾಡಿದ್ದ ಜಿಲ್ಲಾಡಳಿತ, ವಿಜಯಸಾಕ್ಷಿ ಸೇರಿದಂತೆ ವಿವಿಧ ಮಾಧ್ಯಮಗಳ ನಿರಂತರ ವರದಿ ಬೆನ್ನಲ್ಲೇ ಮತ್ತೆ ಕೇಂದ್ರವನ್ನು ತೆರೆಯಬೇಕಾದ ಪರಿಸ್ಥಿತಿ ನಿರ್ಮಾಣವಾಯಿತು.

ವಿಜಯಸಾಕ್ಷಿ ಡಿಜಿಟಲ್ ಮಾಧ್ಯಮದಲ್ಲಿ ಹಾಗೂ ವಿವಿಧ ರಾಜ್ಯ ಮಟ್ಟದ ಟಿವಿ ವಾಹಿನಿಗಳಲ್ಲಿ ಸಂತ್ರಸ್ತರ ಸಂಕಷ್ಟವನ್ನು ನಿರಂತರವಾಗಿ ಬಿತ್ತರಿಸಿದ ಬೆನ್ನಲ್ಲೇ ಆಡಳಿತ ಯಂತ್ರ ಎಚ್ಚೆತ್ತುಕೊಂಡು, ಕಾಳಜಿ ಕೇಂದ್ರವನ್ನು ಮರು ಆರಂಭಿಸಿ ಊಟ ಹಾಗೂ ವಾಸ್ತವ್ಯದ ವ್ಯವಸ್ಥೆ ಕಲ್ಪಿಸಿತು.

ಗದಗ ನಗರದ ಗಂಗಿಮಡಿ ಪ್ರದೇಶದಲ್ಲಿ ಇತ್ತೀಚೆಗೆ ಸುರಿದ ಭಾರಿ ಮಳೆ ಹಾಗೂ ಗಾಳಿಯಿಂದ 30ಕ್ಕೂ ಹೆಚ್ಚು ಕುಟುಂಬಗಳ ತಗಡಿನ ಶೆಡ್‌ಗಳು ಹಾನಿಗೊಳಗಾಗಿದ್ದವು. ಮನೆ ಕಳೆದುಕೊಂಡ ಕುಟುಂಬಗಳಿಗಾಗಿ ಜಿಲ್ಲಾಡಳಿತ ಕಾಳಜಿ ಕೇಂದ್ರ ಆರಂಭಿಸಿತ್ತು.

ಆದರೆ ಶೆಡ್‌ಗಳ ದುರಸ್ತಿ ಪೂರ್ಣಗೊಳ್ಳುವ ಮುನ್ನವೇ ಕಾಳಜಿ ಕೇಂದ್ರವನ್ನು ಏಕಾಏಕಿ ಬಂದ್ ಮಾಡಲಾಗಿತ್ತು. ಇದರಿಂದ ಮಹಿಳೆಯರು, ಮಕ್ಕಳು, ಗರ್ಭಿಣಿಯರು ಹಾಗೂ ಬಾಣಂತಿಯರು ರಾತ್ರಿ ಪೂರ್ತಿ ಬೀದಿಯಲ್ಲೇ ಕಾಲ ಕಳೆಯುವಂತಾಗಿತ್ತು.



ವಿಷಜಂತುಗಳ ಭಯದ ನಡುವೆ ಮಕ್ಕಳು ಹಾಗೂ ವೃದ್ಧರು ನರಳಾಡಿದ ದೃಶ್ಯಗಳು ಜನರಲ್ಲಿ ಆಕ್ರೋಶ ಹುಟ್ಟಿಸಿದ್ದವು.

ಸಂತ್ರಸ್ತರ ಪರದಾಟದ ವರದಿ ಪ್ರಸಾರವಾದ ಬೆನ್ನಲ್ಲೇ ನಗರಸಭೆ ಆಯುಕ್ತ ರಾಜಾರಾಮ ಪವಾರ್ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಿದರು.

ಅಧಿಕಾರಿಗಳ ಎದುರೇ ಸಂತ್ರಸ್ತರು ಕಣ್ಣೀರು ಹಾಕಿ ತಮ್ಮ ನೋವು ಹೇಳಿಕೊಂಡರು. ಈ ವೇಳೆ ಮಾತನಾಡಿದ ಎಸಿ ಗಂಗಪ್ಪ, ಶೆಡ್‌ಗಳ ದುರಸ್ತಿ ಪೂರ್ಣಗೊಳ್ಳುವವರೆಗೆ ಕಾಳಜಿ ಕೇಂದ್ರದಲ್ಲಿ ವಾಸ್ತವ್ಯದ ವ್ಯವಸ್ಥೆ ಮುಂದುವರಿಸಲಾಗುವುದು ಎಂದು ಭರವಸೆ ನೀಡಿದರು.

ಸ್ಥಳಕ್ಕೆ ಭೇಟಿ ನೀಡಿದ ಬಿಜೆಪಿ ಎಂಎಲ್‌ಸಿ ಎಸ್.ವಿ. ಸಂಕನೂರು ಜಿಲ್ಲಾಡಳಿತದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸ್ಥಳಕ್ಕೆ ಭೇಟಿ ನೀಡಿ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಅವರು ಆಗ್ರಹಿಸಿದರು. ಬಿಜೆಪಿ ನಿಯೋಗದ ವತಿಯಿಂದ ಸಂತ್ರಸ್ತರಿಗೆ ಮಧ್ಯಾಹ್ನದ ಊಟದ ವ್ಯವಸ್ಥೆಯನ್ನೂ ಮಾಡಲಾಯಿತು.

> “ಸಂತ್ರಸ್ತರೊಂದಿಗೆ ಅಮಾನವೀಯವಾಗಿ ವರ್ತಿಸಿರುವುದು ಖಂಡನೀಯ, ಸರ್ಕಾರ ಶಾಶ್ವತ ಪರಿಹಾರ ನೀಡಬೇಕು.”
> **– ಎಸ್.ವಿ. ಸಂಕನೂರು,** ಬಿಜೆಪಿ ಎಂಎಲ್‌ಸಿ

ಶುಕ್ರವಾರ ರಾತ್ರಿ ಪೂರ್ತಿ ಕಾಳಜಿ ಕೇಂದ್ರದ ಮುಂದೆ ಸಂತ್ರಸ್ತರು ಗೋಳಾಟ ನಡೆಸಿದ ಬಳಿಕ, ಶನಿವಾರ ಬೆಳಿಗ್ಗೆಯಿಂದಲೇ ಉಪಹಾರ ಹಾಗೂ ಊಟದ ವ್ಯವಸ್ಥೆ ಪುನರಾರಂಭಗೊಂಡಿತು.

ಶೆಡ್‌ಗಳ ದುರಸ್ತಿ ಪೂರ್ಣಗೊಳ್ಳುವವರೆಗೆ ಕಾಳಜಿ ಕೇಂದ್ರ ಮುಂದುವರಿಸುವುದಾಗಿ ಜಿಲ್ಲಾಡಳಿತ ಭರವಸೆ ನೀಡಿದೆ.

ಸಂತ್ರಸ್ತರು ಇನ್ನೂ ಶಾಶ್ವತ ವಸತಿ ಹಾಗೂ ಸುರಕ್ಷಿತ ಆಶ್ರಯ ಕಲ್ಪಿಸುವಂತೆ ಸರ್ಕಾರವನ್ನು ಒತ್ತಾಯಿಸಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸ್ವತಃ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಆಲಿಸಬೇಕು ಎಂದು ಆಗ್ರಹಿಸಿದ್ದಾರೆ.

### ಲಕ್ಷ್ಮೇಶ್ವರ–ದೊಡ್ಡೂರು ರಸ್ತೆ ಅಭಿವೃದ್ಧಿಗೆ ವಿಶೇಷ ಅನುದಾನ ಕೋರಿ ಸಚಿವರಿಗೆ ಮನವಿ

# “ಹದಗೆಟ್ಟ ರಸ್ತೆಗೆ ಜೀವ ತುಂಬಲು ಶಾಸಕರ ಒತ್ತಾಯ”

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ಷೇತ್ರ ವ್ಯಾಪ್ತಿಯ ಹದಗೆಟ್ಟ ರಸ್ತೆಗಳನ್ನು ಸುಧಾರಿಸಲು ಆದ್ಯತೆ ನೀಡುವಂತೆ ಆಗ್ರಹಿಸಿ ಶಿರಹಟ್ಟಿ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಅವರು ಬೆಂಗಳೂರಿನಲ್ಲಿ ಲೋಕೋಪಯೋಗಿ ಸಚಿವ ಸತೀಶ ಜಾರಕೀಹೊಳಿ ಅವರನ್ನು ಭೇಟಿ ಮಾಡಿ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಮನವಿ ಸಲ್ಲಿಸಿದರು.

ಲಕ್ಷ್ಮೇಶ್ವರ–ದೊಡ್ಡೂರು ಪ್ರಮುಖ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ಈ ರಸ್ತೆಯ ಅಭಿವೃದ್ಧಿ ಹಾಗೂ ಮಾರ್ಗ ಮಧ್ಯೆ ಬರುವ ಸೇತುವೆಗಳ ನಿರ್ಮಾಣ ತುರ್ತು ಅಗತ್ಯವಾಗಿದೆ ಎಂದು ಶಾಸಕರು ಸಚಿವರ ಗಮನಕ್ಕೆ ತಂದರು.

ಈ ರಸ್ತೆಯ ಮೂಲಕ ನಿತ್ಯ ನೂರಾರು ವಾಹನಗಳು ಹಾಗೂ ರೈತಾಪಿ ಜನರು ಸಂಚರಿಸುತ್ತಿದ್ದು, ಸಾವಿರಾರು ಎಕರೆ ಕೃಷಿ ಜಮೀನುಗಳಿಗೆ ಇದೇ ಮುಖ್ಯ ಸಂಪರ್ಕ ಮಾರ್ಗವಾಗಿದೆ ಎಂದು ವಿವರಿಸಿದರು.

ರಸ್ತೆಯಲ್ಲಿರುವ ಸೇತುವೆ ಕೆಳಮಟ್ಟದಲ್ಲಿರುವುದರಿಂದ ಮಳೆಗಾಲದಲ್ಲಿ ಅಪಾರ ಪ್ರಮಾಣದ ನೀರು ಹರಿದು ಸಂಚಾರ ಸ್ಥಗಿತಗೊಳ್ಳುತ್ತದೆ. ಈ ಹಿಂದೆ ಭಾರಿ ಮಳೆಯ ಸಂದರ್ಭದಲ್ಲಿ ಬಸ್‌ವೊಂದು ನೀರಿನಲ್ಲಿ ತೇಲಿ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಪ್ರಯಾಣಿಕರನ್ನು ಅಪಾಯದಿಂದ ರಕ್ಷಿಸಲಾಗಿತ್ತು ಎಂದು ನೆನಪಿಸಿದರು.



ಹೀಗಾಗಿ ರಸ್ತೆ ಅಭಿವೃದ್ಧಿಯ ಜೊತೆಗೆ ಹೊಸ ಸೇತುವೆ ನಿರ್ಮಾಣ ಕೂಡ ಅತ್ಯಗತ್ಯವಾಗಿದ್ದು, ಸರ್ಕಾರ ತಕ್ಷಣ ವಿಶೇಷ ಅನುದಾನ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

> “ರೈತರು ಮತ್ತು ಸಾರ್ವಜನಿಕರ ಸುರಕ್ಷಿತ ಸಂಚಾರಕ್ಕಾಗಿ ಲಕ್ಷ್ಮೇಶ್ವರ–ದೊಡ್ಡೂರು ರಸ್ತೆ ಹಾಗೂ ಸೇತುವೆ ಅಭಿವೃದ್ಧಿಗೆ ಆದ್ಯತೆ ನೀಡಬೇಕು.”
> **– ಡಾ. ಚಂದ್ರು ಲಮಾಣಿ, ಶಾಸಕ**

ಮನವಿ ಸ್ವೀಕರಿಸಿದ ಲೋಕೋಪಯೋಗಿ ಸಚಿವ ಸತೀಶ ಜಾರಕೀಹೊಳಿ, ರಾಜ್ಯ ಸರ್ಕಾರ ರಸ್ತೆ ಅಭಿವೃದ್ಧಿ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡುತ್ತಿದೆ ಎಂದು ಹೇಳಿದರು.

ರಾಜ್ಯಾದ್ಯಂತ ರಸ್ತೆ ಅಭಿವೃದ್ಧಿಗೆ ಸಾಕಷ್ಟು ಬೇಡಿಕೆಗಳಿದ್ದು, ಇಲಾಖೆಯ ಆದ್ಯತೆ ಮೇರೆಗೆ ಕ್ರಮ ಕೈಗೊಳ್ಳಲಾಗುವುದು. ಶಿರಹಟ್ಟಿ ಕ್ಷೇತ್ರದ ದೊಡ್ಡೂರು ರಸ್ತೆ ಅಭಿವೃದ್ಧಿ ಕುರಿತ ಮನವಿಯನ್ನು ಸಹ ಸಕಾರಾತ್ಮಕವಾಗಿ ಪರಿಗಣಿಸಿ ಅನುದಾನ ಬಿಡುಗಡೆ ಮಾಡುವುದಾಗಿ ಭರವಸೆ ನೀಡಿದರು.

## 25 ರಂದು ಶ್ರೀ ಬಸವೇಶ್ವರ ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗಾಯತ ಪ್ರಗತಿಶೀಲ ಸಂಘ ವತಿಯಿಂದ ಮೇ 25 ರಂದು ಸಂಜೆ 7 ಕ್ಕೆ ಗದಗ ನಗರದ ತೋಂಟದಾರ್ಯ ಮಠದಲ್ಲಿ ಜರುಗುವ 2799 ನೇ ಶಿವಾನುಭವ ಕಾರ್ಯಕ್ರಮದಲ್ಲಿ ಮಾನವತಾವಾದಿ ಶ್ರೀ ಬಸವೇಶ್ವರ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ ಎಂದು ಲಿಂಬಯ್ಯಸ್ವಾಮಿ ಪ್ರತಿಷ್ಠಾನದ ಅಧ್ಯಕ್ಷ ಪ್ರಕಾಶ ಲಿಂಬಯ್ಯಸ್ವಾಮಿಮಠ ಹೇಳಿದರು.

ಅವರು ಶನಿವಾರ ಗದಗ ನಗರದ ಪತ್ರಿಕಾ ಭವನದಲ್ಲಿ ಆಯೋಜಿಸಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಲಕ್ಷೇಶ್ವರದ ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನ ಆಶ್ರಯದಲ್ಲಿ ನಡೆಯುವ ಈ ಕಾರ್ಯಕ್ರಮವು ಯಡಿಯೂರು ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ತ್ರಿವಿಧ ದಾಸೋಹಿ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ದಿವ್ಯ ಪ್ರಕಾಶದಲ್ಲಿ ಜರುಗಲಿದ್ದು ಸಾನಿಧ್ಯವನ್ನು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಲಿದ್ದಾರೆ. ಮಾನವತಾವಾದಿ ಶ್ರೀ ಬಸವೇಶ್ವರ ಪ್ರಶಸ್ತಿಯನ್ನು ಖ್ಯಾತ ಜಲಸಂರಕ್ಷಕ ರಾಜೇಂದ್ರಸಿಂಗ್ ಅವರಿಗೆ ಪ್ರದಾನ ಮಾಡಲಾಗುತ್ತಿದೆ. ಪ್ರಶಸ್ತಿಯನ್ನು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಪ್ರದಾನ ಮಾಡುವರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಜೆ. ಕೆ. ಜಮಾದಾರ ಉಪನ್ಯಾಸ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಡಿ. ಆರ್. ಪಾಟೀಲ, ಮಾಜಿ ಸಚಿವ ಎಸ್. ಎಸ್. ಪಾಟೀಲ, ಮಾಜಿ ಶಾಸಕ ಜಿ. ಎಸ್. ಗಡ್ಡದ್ದೇವರಮಠ ಹಾಗೂ ಮಾಜಿ ವಿಧಾನಪರಿಷತ್ ಸದಸ್ಯ ಮೋಹನ ಲಿಂಬಿಕಾಯಿ ಭಾಗವಹಿಸಲಿದ್ದಾರೆ.

ಪ್ರಕಾಶ ಎಲ್. ಲಿಂಬಯ್ಯಸ್ವಾಮಿಮಠ ಉಪಸ್ಥಿತರಿರುವರು. ವಚನ ಸಂಗೀತ ಕಾರ್ಯಕ್ರಮವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ನಡೆಸಲಿದ್ದು, ಧರ್ಮಗ್ರಂಥ ಪಠಣವನ್ನು ಖುಷಿ ಹಳ್ಳಿಕೇರಿ ಮತ್ತು ವಚನ ಚಿಂತನವನ್ನು ಶ್ರಾವಣಿ ಕಳ್ಳಿಮನಿ ನೆರವೇರಿಸಲಿದ್ದಾರೆ.

ಎಂದ ಅವರು ಲಿಂಬಯ್ಯಸ್ವಾಮಿ ಪ್ರತಿಷ್ಠಾನ ನಡೆದು ಬಂದ ಹಾದಿ ಹಾಗೂ ಅದಕ್ಕಾಗಿ ಶ್ರಮಿಸಿದ ಹಿರಿಯರು ಮತ್ತು ಇದುವರೆಗೂ ಪ್ರಶಸ್ತಿ ನೀಡಿದವರ ವಿವರವನ್ನು ನೀಡಿದರು. ಸುದ್ದಿಗೋಷ್ಠಿಯಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ.ಪುರದ, ತೋಂಟದಾರ್ಯ ಜಾತ್ರ ಕಮಿಟಿ ಅಧ್ಯಕ್ಷ ವಿನಾಯಕ ಮಾನ್ವಿ, ಸಂತೋಷ ಗಾರ್ಗಿ, ಮಹೇಶ ಲಿಂಬಯ್ಯಸ್ವಾಮಿಮಠ, ಈಶ್ವರ ಮೆಡ್ಲೇರಿ, ಬಸವರಾಜ ಗಾಂಜಿ, ಡಾ.ಸಿದ್ದರಾಮೇಶ್ವರ ಪಟ್ಟೇದ, ಸುರೇಖಾ ಪಿಳ್ಳಿ, ಚಂದ್ರಶೇಖರಪ್ಪ ಹಳ್ಳಿ ಮುಂತಾದವರು ಹಾಜರಿದ್ದರು.

### ಬಲೂನ್, ಪುಷ್ಪಮಳೆ, ಎತ್ತಿನ ಬಂಡಿ ಮೂಲಕ ಮಕ್ಕಳಿಗೆ ಅದ್ಧೂರಿ ಸ್ವಾಗತಕ್ಕೆ ಶಿಕ್ಷಣ ಇಲಾಖೆ ಸಜ್ಜು

# ಹಬ್ಬದ ಸಂಭ್ರಮದಲ್ಲಿ ಶಾಲೆ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವವನ್ನು ಹಬ್ಬದ ಸಂಭ್ರಮದಲ್ಲಿ ಆಚರಿಸಲು ಸಾರ್ವಜನಿಕ ಶಿಕ್ಷಣ ಇಲಾಖೆ ಸಜ್ಜಾಗಿದ್ದು, ಮಕ್ಕಳಿಗೆ ಅದ್ದೂರಿಯಾಗಿ ಸ್ವಾಗತ ಕೋರಲು ಶಾಲೆಗಳಿಗೆ ವಿಶೇಷ ಸೂಚನೆ ನೀಡಲಾಗಿದೆ.

ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ಗದಗ ಶಹರದ ಎಲ್ಲ ಸರ್ಕಾರಿ ಶಾಲೆಗಳ ಮುಖ್ಯೋಪಾಧ್ಯಾಯರ ಪೂರ್ವಭಾವಿ ಸಭೆ ನಡೆಯಿತು. ಸಭೆಯಲ್ಲಿ ಶಾಲಾ ಪ್ರಾರಂಭೋತ್ಸವವನ್ನು ಆಕರ್ಷಕವಾಗಿ ಆಚರಿಸುವ ಕುರಿತು ಅಧಿಕಾರಿಗಳು ಮಾರ್ಗಸೂಚಿ ನೀಡಿದರು.

ಶಾಲಾ ಆರಂಭಕ್ಕೂ ಮುನ್ನ ಶಾಲಾ ಕೊಠಡಿಗಳು, ಮೈದಾನ, ಶೌಚಾಲಯ ಸೇರಿದಂತೆ ಸಂಪೂರ್ಣ ಶಾಲಾ ಆವರಣವನ್ನು ಸ್ವಚ್ಛಗೊಳಿಸಬೇಕು. ತಳಿರು ತೋರಣಗಳಿಂದ ಶಾಲೆಯನ್ನು ಅಲಂಕರಿಸಿ ಹಬ್ಬದ ವಾತಾವರಣ ನಿರ್ಮಿಸಬೇಕು ಎಂದು ಸೂಚಿಸಲಾಯಿತು.

ಜೂನ್ 1ರಂದು ನಡೆಯುವ ಶಾಲಾ ಪ್ರಾರಂಭೋತ್ಸವದಲ್ಲಿ ಎಸ್‌ಡಿಎಂಸಿ ಸದಸ್ಯರು, ಪಾಲಕರು, ಹಳೆಯ ವಿದ್ಯಾರ್ಥಿಗಳು ಹಾಗೂ ಶಾಲಾ ಸಿಬ್ಬಂದಿ ಭಾಗವಹಿಸಿ ಮಕ್ಕಳನ್ನು ಹೂಗುಚ್ಛ, ಪುಷ್ಪಮಳೆ, ಬಲೂನ್ ಹಾರಿಸುವುದು, ಎತ್ತಿನ ಬಂಡಿ ಮೆರವಣಿಗೆ ಸೇರಿದಂತೆ ವಿಶೇಷ ರೀತಿಯಲ್ಲಿ ಸ್ವಾಗತಿಸಬೇಕು ಎಂದು ತಿಳಿಸಲಾಯಿತು.



> “ಶಾಲಾ ಆರಂಭ ಮಕ್ಕಳಿಗೆ ಕೇವಲ ಮೊದಲ ದಿನವಾಗಿರಬಾರದು; ಅದು ಜೀವನಪೂರ್ತಿ ನೆನಪಾಗುವ ಹಬ್ಬದ ಅನುಭವವಾಗಬೇಕು.”
> – ಆರ್.ಎಸ್. ಬುರಡಿ, ಉಪನಿರ್ದೇಶಕರು

ಸಭೆಯಲ್ಲಿ ಉಪನಿರ್ದೇಶಕ ಆರ್. ಎಸ್. ಬುರಡಿ ಮಾತನಾಡಿ, ಮಕ್ಕಳಲ್ಲಿ ಶಾಲೆಯ ಕುರಿತು ಆತ್ಮೀಯತೆ ಮೂಡುವಂತೆ ಕಾರ್ಯಕ್ರಮ ಆಯೋಜಿಸಬೇಕು ಎಂದು ಹೇಳಿದರು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಪ್ರಾಚಾರ್ಯ ಕೆ.ಡಿ. ಬಡಿಗೇರ ಮಾತನಾಡಿ, ಸರ್ಕಾರಿ ಶಾಲೆಗಳ ಉಳಿವಿಗಾಗಿ ಶಿಕ್ಷಕರು, ಪಾಲಕರು ಮತ್ತು ಸಮಾಜ ಒಗ್ಗಟ್ಟಿನಿಂದ ಶ್ರಮಿಸಬೇಕೆಂದು ಕರೆ ನೀಡಿದರು.

ಈ ಶೈಕ್ಷಣಿಕ ವರ್ಷದಲ್ಲಿ ದಾಖಲಾತಿ ಪ್ರಮಾಣವನ್ನು ಕನಿಷ್ಠ 15 ಶೇಕಡಾ ಹೆಚ್ಚಿಸುವ ಗುರಿ ಹೊಂದಿ ಕಾರ್ಯನಿರ್ವಹಿಸಬೇಕು ಎಂದು ಅವರು ತಿಳಿಸಿದರು.

ಸಭೆಯಲ್ಲಿ ವಿವಿಧ ಸಂಘಟನೆಗಳ ಪದಾಧಿಕಾರಿಗಳು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಇದೇ ವೇಳೆ ವೇದಿಕೆಯ ಮೇಲಿದ್ದ ಗಣ್ಯರು, ಪ್ರಾಥಮಿಕ ಶಾಲಾ ಸಂಘಕ್ಕೆ ಆಯ್ಕೆಯಾದ ಪದಾಧಿಕಾರಿಗಳು, ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರು ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ತರಲು ಶ್ರಮಿಸಿದ ಶಿಕ್ಷಕರನ್ನು ಬಿಇಒ ಕಚೇರಿ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ಕಾರ್ಯಕ್ರಮವನ್ನು ಬಿಆರ್‌ಪಿ ಯರಗುಡಿ ನಿರೂಪಿಸಿದರು. ಬಿಆರ್‌ಪಿ ಶ್ಯಾಮ ಲಾಂಡೆ ವಂದಿಸಿದರು.

**"ಜಾತಿ ಅಸ್ಪೃಶ್ಯತೆ ಮತ್ತು ಅಸಮಾನತೆಯನ್ನು ಬಲಪಡಿಸುವ ಸಮಾವೇಶಕ್ಕೆ ನಾಗರಿಕರು ಭಾಗವಹಿಸಬಾರದು"**

# ಹಿಂದೂ ಸಮಾವೇಶ ವಿರೋಧಿಸಿ ಸಿಪಿಐ(ಎಂ) ಪ್ರತಿಭಟನೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಾತಿ ಅಸ್ಪೃಶ್ಯತೆ ಹಾಗೂ ಅಸಮಾನತೆಯನ್ನು ಬಲಪಡಿಸುವ ಹುನ್ನಾರ ಹೊಂದಿರುವ ಬಿಜೆಪಿ–ಸಂಘ ಪರಿವಾರ ಪ್ರಾಯೋಜಿತ ಹಿಂದುತ್ವ ಸಮಾವೇಶಕ್ಕೆ ನಾಗರಿಕರು ಯಾವುದೇ ಕಾರಣಕ್ಕೂ ಬೆಂಬಲ ನೀಡಬಾರದು ಹಾಗೂ ಭಾಗವಹಿಸಬಾರದು ಎಂದು ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಜಿಲ್ಲಾ ಸಮಿತಿ ಮನವಿ ಮಾಡಿದೆ.

ನಗರದ ಗಾಂಧಿ ಸರ್ಕಲ್‌ನಲ್ಲಿ ಸಿಪಿಐ(ಎಂ) ಜಿಲ್ಲಾ ಸಮಿತಿ ನೇತೃತ್ವದಲ್ಲಿ, ಕನ್ನೇರಿ ಕಾಡುಸಿದ್ದೇಶ್ವರಸ್ವಾಮಿ ನೇತೃತ್ವದಲ್ಲಿ ಶರಣರ ಹೆಸರಿನಲ್ಲಿ ನಡೆಯುತ್ತಿರುವ ಹಿಂದುತ್ವ ಸಮಾವೇಶವನ್ನು ವಿರೋಧಿಸಿ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಮಾತನಾಡಿದ ಸಿಪಿಐ(ಎಂ) ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯ ಯು. ಬಸವರಾಜ್, ಭಾರತ ದೇಶದ ಸಮಾಜವನ್ನು ಮನುವಾದಿಗಳು ಮೂಲದಲ್ಲೇ ಅಸಮಾನತೆ ಮತ್ತು ಜಾತಿ ಅಸ್ಪೃಶ್ಯತೆಯಿಂದ ಕೂಡಿದ ಸಮಾಜವಾಗಿ ಕಟ್ಟಿಕೊಂಡು ಅದನ್ನು ಪೋಷಿಸಿಕೊಂಡು ಬಂದಿದ್ದಾರೆ ಎಂದು ಆರೋಪಿಸಿದರು. ಅದರ ವಿರುದ್ಧವಾಗಿ ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಸೂಫಿ ಸಂತರು ಸಮಾನತೆಯ




ಹೋರಾಟವನ್ನು ಮುನ್ನಡೆಸಿದ್ದಾರೆ ಎಂದರು.

"12ನೇ ಶತಮಾನದ ಶರಣರ ಚಳುವಳಿ ಜಾಗತಿಕವಾಗಿ ಗಮನ ಸೆಳೆದ ಸಮಾನತೆಯ ಹೋರಾಟವಾಗಿದೆ. ಆದರೆ ಅಂದಿನ ಮನುವಾದಿ ಹಾಗೂ ಸನಾತನ ಶಕ್ತಿಗಳು ಶರಣ ಚಳುವಳಿಯನ್ನು ಮಟ್ಟ ಹಾಕಿ ಶರಣರನ್ನು ಕೊಲ್ಲೆ ಮಾಡಿದ್ದವು. ಅದೇ ಸನಾತನವಾದಿ ಶಕ್ತಿಗಳು ಇಂದು ಬಿಜೆಪಿ ಮತ್ತು ಸಂಘ ಪರಿವಾರದ ಹೆಸರಿನಲ್ಲಿ ಸಮಾಜದಲ್ಲಿ ಜಾತಿ ಅಸ್ಪೃಶ್ಯತೆ ಹಾಗೂ ಅಸಮಾನತೆಯನ್ನು ಜೀವಂತವಾಗಿಡಲು ಎಲ್ಲ ರೀತಿಯ ಪ್ರಯತ್ನ ನಡೆಸುತ್ತಿವೆ" ಎಂದು ಟೀಕಿಸಿದರು.

> "ಸೌಹಾರ್ದತೆಯ ನೆಲವಾದ ಗದಗದಲ್ಲಿ ಕೋಮುವಾದಿ ಸಮಾವೇಶವನ್ನು ಜನರು ಒಗ್ಗಟ್ಟಿನಿಂದ ವಿರೋಧಿಸಿ ವಿಫಲಗೊಳಿಸಬೇಕು."
> – **ಬಾಲು ರಾಠೋಡ,** ಜಿಲ್ಲಾ ಕಾರ್ಯದರ್ಶಿ

"ಲಿಂಗಾಯತ ಸಮುದಾಯದ ಕನ್ನೇರಿ ಕಾಡುಸಿದ್ದೇಶ್ವರಸ್ವಾಮಿಯನ್ನು ಮುಂದಿಟ್ಟುಕೊಂಡು ಶರಣರ ಹೆಸರಿನಲ್ಲಿ ಹಿಂದುತ್ವ ಸಮಾವೇಶ ನಡೆಸಲಾಗುತ್ತಿದೆ. ಸಮಾನತೆ ಮತ್ತು ವಚನ ಚಳುವಳಿಯಲ್ಲಿ ನಂಬಿಕೆ ಇಟ್ಟಿರುವ ಗದುಗಿನ ಜನರು ಇಂತಹ ಕಾರ್ಯಕ್ರಮಕ್ಕೆ ಯಾವುದೇ ರೀತಿಯ ಬೆಂಬಲ ನೀಡಬಾರದು" ಎಂದು ಅವರು ಕರೆ ನೀಡಿದರು.

ನಂತರ ಮಾತನಾಡಿದ ಜಿಲ್ಲಾ ಸಮಿತಿ ಸದಸ್ಯ ಎಂ.ಎಸ್. ಹಡಪದ, ಕೇಂದ್ರ ಸರ್ಕಾರದ ಬೆಲೆ ಏರಿಕೆ, ನಿರುದ್ಯೋಗ ಹಾಗೂ ಹಣದುಬ್ಬರದಿಂದ ಜನಸಾಮಾನ್ಯರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

"ಸರ್ಕಾರದ ನೀತಿಗಳ ವಿರುದ್ಧ ಜನರಲ್ಲಿ ಅಸಮಾಧಾನ ಹೆಚ್ಚಾಗುತ್ತಿದ್ದು, ಪ್ರತಿಭಟನೆಗಳೂ ಆರಂಭವಾಗಿವೆ. ಈ ಪ್ರತಿಭಟನಾ ಜ್ವಾಲೆಯನ್ನು ಹತ್ತಿಕ್ಕಲು ಕಾರ್ಪೊರೇಟ್ ಮಾಧ್ಯಮಗಳು ಹಾಗೂ ಬಂಡವಾಳಶಾಹಿ ವ್ಯವಸ್ಥೆ ಕೋಮುವಾದಿ ಶಕ್ತಿಗಳ ಜೊತೆ ಕೈಜೋಡಿಸಿ ಧರ್ಮದ ಹೆಸರಿನಲ್ಲಿ ವಿಭಜನಕಾರಿ ನೀತಿಗಳನ್ನು ಮುನ್ನಲೆಗೆ ತರುತ್ತಿವೆ" ಎಂದು ಆರೋಪಿಸಿದರು.

> "ಬೆಲೆ ಏರಿಕೆ, ನಿರುದ್ಯೋಗ, ಹಣದುಬ್ಬರದ ವಿರುದ್ಧ ಜನರ ಅಸಮಾಧಾನವನ್ನು ಮರೆಮಾಚಲು ಧರ್ಮದ ಹೆಸರಿನಲ್ಲಿ ವಿಭಜನಕಾರಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ."
> – **ಎಂ.ಎಸ್. ಹಡಪದ,** ಜಿಲ್ಲಾ ಸಮಿತಿ ಸದಸ್ಯ

> "ಶರಣರ ಸಮಾನತೆಯ ಚಳುವಳಿಯನ್ನು ಸನಾತನ ಶಕ್ತಿಗಳು ಅಂದು ದಮನಿಸಿದ್ದವು. ಅದೇ ಶಕ್ತಿಗಳು ಇಂದು ಬಿಜೆಪಿ ಮತ್ತು ಸಂಘ ಪರಿವಾರದ ರೂಪದಲ್ಲಿ ಸಮಾಜದಲ್ಲಿ ಅಸಮಾನತೆಯನ್ನು ಜೀವಂತವಾಗಿಡಲು ಪ್ರಯತ್ನಿಸುತ್ತಿವೆ."
> – **ಯು. ಬಸವರಾಜ್,** ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯ

"ಸರ್ಕಾರ ಮತ್ತು ಕಾರ್ಪೊರೇಟ್ ಬಂಡವಾಳಶಾಹಿ ವ್ಯವಸ್ಥೆಯ ವಿರುದ್ಧ ಜನರು ಧ್ವನಿ ಎತ್ತದಂತೆ ಮಾಡಲು ದೇಶದಾದ್ಯಂತ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಅದರ ಭಾಗವಾಗಿಯೇ ಕರ್ನಾಟಕದಲ್ಲೂ ಹಿಂದುತ್ವ ಹಾಗೂ ಸಂಘ ಪರಿವಾರದ ಶಕ್ತಿಗಳ ಕುತಂತ್ರದಿಂದ ಈ ಸಮಾವೇಶ ಗದಗದಲ್ಲಿ ನಡೆಯುತ್ತಿದೆ" ಎಂದು ಹೇಳಿದರು.

"ಮಾನವೀಯತೆ ಮತ್ತು ಸಮಾನತೆಯಲ್ಲಿ ನಂಬಿಕೆ ಇಟ್ಟಿರುವವರು ಯಾರೂ ಕೂಡ ಈ ಕಾರ್ಯಕ್ರಮಕ್ಕೆ ಬೆಂಬಲ ನೀಡಬಾರದು. ದೇಶದ ಜನತೆ ಬೆಲೆ ಏರಿಕೆ, ನಿರುದ್ಯೋಗ ಹಾಗೂ ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ಹೋರಾಟಕ್ಕೆ ಮುಂದಾಗಬೇಕು" ಎಂದು ಕರೆ ನೀಡಿದರು.

ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಬಾಲು ರಾಠೋಡ ಮಾತನಾಡಿ, ಗದಗ ಜಿಲ್ಲೆ ಸೌಹಾರ್ದತೆಯ ನಾಡಾಗಿದ್ದು, ತೋಂಟದಾರ್ಯ ಮಠ, ಗವಾಯಿಗಳ ಮಠ, ಡಂಬಳ ಮಠ, ಹಾಲಕೆರೆ ಮಠ ಸೇರಿದಂತೆ ಅನೇಕ ಮಠಗಳು ಶರಣರ ಆಶಯವನ್ನು ಎತ್ತಿಹಿಡಿಯುವ ಕೆಲಸ ಮಾಡುತ್ತಿವೆ ಎಂದು ಹೇಳಿದರು.

"ಇಂತಹ ಸಂದರ್ಭದಲ್ಲಿ ಹಿಂದುತ್ವದ ಕೋಮುವಾದಿ ಸಮಾವೇಶವನ್ನು ಗದುಗಿನ ಜನತೆ ಒಗ್ಗಟ್ಟಿನಿಂದ ವಿರೋಧಿಸಿ ವಿಫಲಗೊಳಿಸಬೇಕು" ಎಂದು ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಸಮಿತಿ ಸದಸ್ಯರಾದ ಪೀರೂ ರಾಠೋಡ, ಮೈಬು ಹವಾಲ್ದಾರ್, ಬಸವರಾಜ್ ಮಂತೂರ್, ಪಕ್ಷದ ಸದಸ್ಯರಾದ ಚಂದ್ರು ರಾಠೋಡ, ಕನಕರಾಯ ಹಾದಿಮನಿ, ದೇವಪ್ಪ, ಗಣೇಶ ರಾಠೋಡ, ಮರಿಯಮ್ಮ ಮುಳುಗುಂದ, ಮಂಜವ್ವ, ಫಕೀರವ್ವ ಪೂಜಾರ್, ಶಿವಕ್ಕ ಬೆವನಮರದ, ರೇಣುಕಾ ಛಲವಾದಿ, ಸರಸ್ವತಿ ಬಣಕಾರ, ನಾಗರತ್ನ ಸೇರಿದಂತೆ ಹಲವರು ಭಾಗವಹಿಸಿದ್ದರು.

**ಡಾ. ಶಿವರಾಜಕುಮಾರ್ ಕೈಯಲ್ಲಿ ಅನಾವರಣ–ಜೂನ್ 12ರಂದು ತೆರೆಗೆ ಬರಲು ಸಜ್ಜಾದ ಆಕ್ಷನ್ ಥ್ರಿಲ್ಲರ್ ಚಿತ್ರ**

# ಮದ್ದಾನೆ' ಟೈಟಲ್–ಪೋಸ್ಟರ್ ಬಿಡುಗಡೆ




■ **ವಿಜಯಸಾಕ್ಷಿ ಸುದ್ದಿ,** ಬೆಂಗಳೂರು

ಎಲ್‌ಎಮ್ ಫಿಲ್ಮ್ಸ್ ಬೆಂಗಳೂರು ನಿರ್ಮಾಣದ 'ಮದ್ದಾನೆ' ಕನ್ನಡ ಚಿತ್ರದ ಟೈಟಲ್ ಹಾಗೂ ಪೋಸ್ಟರ್ ಅನ್ನು ಕರುನಾಡ ಚಕ್ರವರ್ತಿ ಡಾ. ಶಿವರಾಜಕುಮಾರ್ ಹಾಗೂ ಗೀತಾ ಶಿವರಾಜಕುಮಾರ್ ಬಿಡುಗಡೆ ಮಾಡಿದರು.

ಟೈಟಲ್ ಲಾಂಚ್ ಬಳಿಕ ಮಾತನಾಡಿದ ಶಿವರಾಜಕುಮಾರ್, ಚಿತ್ರ ಯಶಸ್ವಿಯಾಗಲಿ ಎಂದು ಚಿತ್ರತಂಡಕ್ಕೆ ಶುಭ ಹಾರೈಸಿದರು.

'ಮದ್ದಾನೆ' ಚಿತ್ರವು ಚಿಕ್ಕ ವಯಸ್ಸಿನಲ್ಲಿ ಮನೆ ಬಿಟ್ಟು ಮುಂಬೈಗೆ ತೆರಳಿದ ಯುವಕನ ಬದುಕಿನ ಸುತ್ತ ಹೆಣೆಯಲ್ಪಟ್ಟ ಕಥೆಯಾಗಿದೆ. ಮುಂಬೈನಲ್ಲಿ ಆಂಟಿ ಟೆರರಿಸಂ ಸ್ಕ್ವಾಡ್ ಸದಸ್ಯನಾಗಿ ಕಾರ್ಯನಿರ್ವಹಿಸುವ ನಾಯಕ, ಲವ್ ಜಿಹಾದ್ ಮತ್ತು ಡ್ರಗ್ಸ್ ಮಾಫಿಯಾ ಜಾಲವನ್ನು ಪತ್ತೆಹಚ್ಚಲು ರೌಡಿಸಂ ಲೋಕಕ್ಕೆ ಇಳಿದು, ಸಂಕಷ್ಟದಲ್ಲಿರುವ ತನ್ನ ಕುಟುಂಬವನ್ನು ಹೇಗೆ ರಕ್ಷಿಸುತ್ತಾನೆ ಎಂಬುದನ್ನು ಚಿತ್ರದಲ್ಲಿ ತೋರಿಸಲಾಗಿದೆ ಎಂದು ನಿರ್ದೇಶಕ ಕೆ. ರಾಜಶರಣ್ ತಿಳಿಸಿದರು.

ನಾಯಕನಾಗಿ ಅಭಿನಯಿಸಿರುವ ಆರ್ಯ ಅವರಿಗೆ ಇದು ಎರಡನೇ ಚಿತ್ರವಾಗಿದೆ. ಈ ಹಿಂದೆ 'ಕ್ಯಾಂಪಸ್ ಕ್ರಾಂತಿ' ಚಿತ್ರದಲ್ಲಿ ಕಾಲೇಜು ವಿದ್ಯಾರ್ಥಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು. 'ಎಮ್ಮೆತಿಮ್ಮ' ಹಾಗೂ 'ಮೊದಲ ಮಳೆ' ಚಿತ್ರಗಳಿಗೆ ನಿರ್ದೇಶನ ಮಾಡಿದ್ದ ಕೆ. ರಾಜಶರಣ್ ಅವರಿಗೆ ಇದು ಮೂರನೇ ಸಿನಿಮಾ.

ಚಿತ್ರರಂಗದಲ್ಲಿ ಉತ್ತಮ ಅಭಿರುಚಿಯ ಸಿನಿಮಾಗಳನ್ನು ನೀಡುವ ಕನಸಿನೊಂದಿಗೆ 15 ವರ್ಷಗಳ ಹಿಂದೆ ಕಲ್ಯಾಣ ಕರ್ನಾಟಕದ ಸುರಪುರ ತಾಲೂಕಿನ ಜೋಗುಂಡಭಾವಿ ಗ್ರಾಮದಿಂದ ಬೆಂಗಳೂರಿಗೆ ಬಂದ ರಾಜಶರಣ್, ಇದೀಗ ತಮ್ಮ ಕನಸನ್ನು ನನಸು ಮಾಡಿಕೊಂಡಿದ್ದಾರೆ.

ಬೆಂಗಳೂರು, ಮಂಡ್ಯ ಹಾಗೂ ಮೈಸೂರಿನಲ್ಲಿ ಸುಮಾರು 30 ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದೆ. ಚಿತ್ರದಲ್ಲಿ ಶ್ರೀನಿವಾಸಮೂರ್ತಿ, ಲತಾ ಮೂರ್ತಿ, ರಾಣಿ, ಸುಜಾತ ಹಿರೇಮಠ, ಏಕಾಂಬರಂ, ಸುಧಾಕರ್, ರಾಮಕೃಷ್ಣ ಹಾಗೂ ಪೂಜಿತ್ ಸೇರಿದಂತೆ ಹಲವರು ಅಭಿನಯಿಸಿದ್ದಾರೆ.

ಚಿತ್ರಕ್ಕೆ ನಾಗಭೂಷಣ್ ಪೂಜಾರ್ ಛಾಯಾಗ್ರಹಣವಿದ್ದು, ಪ್ರಸನ್ನ ಭೋಜಶೆಟ್ಟರ್ ಸಂಗೀತ ಸಂಯೋಜಿಸಿದ್ದಾರೆ. ಡಾ. ಮಾರುತಿ ಎನ್.ಇ ಹಾಗೂ ಎಸ್.ವಿ. ಶಿವಕುಮಾರ್ ಸಾಹಿತ್ಯ ರಚಿಸಿದ್ದು, ಸ್ಟಾರ್ ನಾಗಿ ನೃತ್ಯ ಸಂಯೋಜನೆ ಮಾಡಿದ್ದಾರೆ. ರಾಜೇಶ್ ಚೌಹಾಣ್ ಸಂಕಲನ ಕಾರ್ಯ ನಿರ್ವಹಿಸಿದ್ದಾರೆ.

ಶ್ರೀಮತಿ ಲತಾ ಮೂರ್ತಿ ಚಿತ್ರಕ್ಕೆ ಬಂಡವಾಳ ಹೂಡಿದ್ದು, ಸೆನ್ಸಾರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಜೂನ್ 12ರಂದು ಚಿತ್ರವನ್ನು ಬಿಡುಗಡೆ ಮಾಡಲು ಸಿದ್ಧತೆ ನಡೆದಿದೆ ಎಂದು ನಿರ್ಮಾಪಕಿ ಲತಾ ಮೂರ್ತಿ ತಿಳಿಸಿದ್ದಾರೆ.

# ರೆಡ್‌ಕ್ರಾಸ್ ದಿನದಂದು ಸ್ಟಿಕ್ಕರ್ ಬಿಡುಗಡೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವ ರೆಡ್‌ಕ್ರಾಸ್ ದಿನದ ಅಂಗವಾಗಿ ಗದಗ ಜಿಲ್ಲಾ ರೆಡ್‌ಕ್ರಾಸ್ ಸೊಸೈಟಿ ವತಿಯಿಂದ ನಗರದಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ವಾಹನ ಸ್ಟಿಕ್ಕರ್‌ಗಳನ್ನು ಡಾ. ಪ್ಯಾರಾಲಿ ನೂರಾನಿ ಬಿಡುಗಡೆ ಮಾಡಿ ವಿತರಿಸಿದರು. ಈ ಸ್ಟಿಕ್ಕರ್‌ಗಳನ್ನು ರಾಜ್ಯ ರೆಡ್‌ಕ್ರಾಸ್ ಅಧ್ಯಕ್ಷ ಬಸರೂರ್ ರಾಜೀವ್ ಶೆಟ್ಟಿ, ಐಆರ್‌ಸಿಎಸ್ ಕೆಎಸ್‌ಬಿ ಬೆಂಗಳೂರು ಅವರು ಅಧಿಕೃತವಾಗಿ




ಅನಾವರಣಗೊಳಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ವಿಕೇಂದ್ರೀಕರಣ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ್, ಮಾಜಿ ಸಚಿವ ಎಸ್.ಎಸ್. ಪಾಟೀಲ್, ಐಆರ್‌ಸಿಎಸ್ ಕೆಎಸ್‌ಬಿ ಬೆಂಗಳೂರು ಉಪಾಧ್ಯಕ್ಷ ಡಾ. ಶ್ರೀನಿವಾಸ್ ಹಯಾತಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಗದಗ ಐಆರ್‌ಸಿಎಸ್ ಅಧ್ಯಕ್ಷ ಡಾ. ಆರ್.ಎನ್. ಗೋಡ್‌ಬೋಲೆ, ಕಾರ್ಯದರ್ಶಿ ಡಾ. ಸಮುದ್ರಿ, ಶ್ರೀನಿವಾಸ್ ಹುಯಿಲ್‌ಗೋಳ, ಪ್ರೊ. ಕೆ.ಎಚ್. ಬೇಲೂರು, ಧೀರೇಂದ್ರ ಹುಯಿಲ್‌ಗೋಳ, ಪ್ರಕಾಶ್ ವೇಲಾಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಕೊನೆಯಲ್ಲಿ ಕೆಎಚ್‌ಪಿಐಎಂಎಸ್‌ನ ಎಂಬಿಬಿಎಸ್ ಸಾಧಕರಿಗೆ ಪಲ್ಸ್ ಆಕ್ಸಿಮೀಟರ್‌ಗಳನ್ನು ಉಡುಗೊರೆಯಾಗಿ ನೀಡಲಾಯಿತು.

# ಮೃತ ಮರಿತಮ್ಮಪ್ಪ ಮನೆಗೆ ಜೆಡಿಎಸ್ ನಿಯೋಗ ಭೇಟಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಮೊನ್ನೆ ಸುರಿದ ಭಾರಿ ಮಳೆ ಹಾಗೂ ಗಾಳಿಗೆ ಸಿಲುಕಿ ಮೃತಪಟ್ಟ ನಗರದ ಒಕ್ಕಲಿಗೇರಿ ಓಣಿಯ ನಿವಾಸಿ, ಕುರಿಗಾಯಿ ಮರಿತಮ್ಮಪ್ಪ ಗಿಡ್ಡಹನುಮಣ್ಣವರ ಅವರ ಮನೆಗೆ ಜೆಡಿಎಸ್ ಪಕ್ಷದ ನಿಯೋಗ ಗುರುವಾರ ಭೇಟಿ ನೀಡಿ ಕುಟುಂಬದವರಿಗೆ ಸಾಂತ್ವನ ಹೇಳಿತು.

ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ನೇತೃತ್ವದ ನಿಯೋಗ ಮೃತರ ತಂದೆ–ತಾಯಿ ಹಾಗೂ ಇಬ್ಬರು ಮಕ್ಕಳಿಗೆ ಧೈರ್ಯ ತುಂಬಿ, ಕುಟುಂಬಕ್ಕೆ ಅಗತ್ಯ ನೆರವು ದೊರಕಿಸಿಕೊಡುವ ಭರವಸೆ ನೀಡಿತು.



ಮೃತ ಮರಿತಮ್ಮಪ್ಪ ಅವರ ತಂದೆ ಪಾರ್ಶ್ವವಾಯು ಪೀಡಿತರಾಗಿದ್ದು, ಬೇರೆಯವರ ಮೇಲೆ ಅವಲಂಬಿತ ಜೀವನ ಸಾಗಿಸುತ್ತಿದ್ದಾರೆ. ತಾಯಿಯೂ ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದು, ಕುಟುಂಬದ ನಿರ್ವಹಣೆ ಸಂಪೂರ್ಣವಾಗಿ ಮರಿತಮ್ಮಪ್ಪ ಅವರ ಮೇಲೇ ಇತ್ತು. ಅವರ ಅಕಾಲಿಕ ನಿಧನದಿಂದ ಕುಟುಂಬ ದಿಕ್ಕುತೋಚದ ಸ್ಥಿತಿಗೆ ತಲುಪಿದೆ ಎಂದು ನಿಯೋಗ ಸದಸ್ಯರು ಬೇಸರ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವೆಂಕನಗೌಡ ಆರ್. ಗೋವಿಂದಗೌಡ್ರ, "ಇಂತಹ ಸಂಕಷ್ಟದ ಸಂದರ್ಭದಲ್ಲಿ ಜಿಲ್ಲಾಡಳಿತ ತಕ್ಷಣ ಸ್ಪಂದಿಸಿ ಕುಟುಂಬಕ್ಕೆ ಸೂಕ್ತ ಪರಿಹಾರ ಹಾಗೂ ಆರ್ಥಿಕ ನೆರವು ಕಲ್ಪಿಸಬೇಕು. ಜೆಡಿಎಸ್ ಪಕ್ಷವೂ ಈ ಕುಟುಂಬಕ್ಕೆ ನೆರವು ದೊರಕಿಸಲು ಪ್ರಯತ್ನ ಮಾಡಲಿದೆ" ಎಂದು ಹೇಳಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ವೀರನಗೌಡ ನಾಡಗೌಡ್ರು, ಬಸವರಾಜ ಅಪ್ಪಣ್ಣವರ್, ಮಂಜುನಾಥ ಗುದ್ದಿನ್, ಬೂದೇಶ್ ಮಜ್ಜಿಗುಡ್, ಪ್ರಫುಲ್ ಪುಣೇಕರ್, ಪ್ರಭುರಾಜಗೌಡ ಪಾಟೀಲ, ವಿರೂಪಾಕ್ಷಯ್ಯ ಹಿರೇಮಠ, ಶ್ರೀಕಾಂತಗೌಡ ಪಾಟೀಲ, ಸತೀಶ ಗಿಡಹನುಮಣ್ಣವರ ಸೇರಿದಂತೆ ಜೆಡಿಎಸ್ ಮುಖಂಡರು ಉಪಸ್ಥಿತರಿದ್ದರು.

**ಮೇ 31ರಂದು ಗದಗದಲ್ಲಿ ಬೃಹತ್ ಹಿಂದೂ ಸಮಾವೇಶ–ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮಹಿಳೆಯರಿಗೆ ಮನವಿ**

# ಹಿಂದೂ ಸಮಾವೇಶದಲ್ಲಿ ಪಾಲ್ಗೊಳ್ಳಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಮೇ 31ರಂದು ನಗರದ ವ್ಹಿ.ಡಿ.ಎಸ್.ಟಿ.ಸಿ ಮೈದಾನದಲ್ಲಿ ಕನ್ಹೇರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿಗಳ ನೇತೃತ್ವದಲ್ಲಿ ನಡೆಯಲಿರುವ ಬೃಹತ್ ಹಿಂದೂ ಸಮಾವೇಶಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಸಮಿತಿಯ ಮಹಿಳಾ ಸಂಚಾಲಕಿ ವಿಜಯಲಕ್ಷ್ಮೀ ಮಾನ್ವಿ ಕರೆ ನೀಡಿದರು.

ನಗರದ ನಗರೇಶ್ವರ ದೇವಸ್ಥಾನದಲ್ಲಿ ಅಧಿಕ ಮಾಸದ ಪ್ರಯುಕ್ತ ಆಯೋಜಿಸಿದ್ದ ಲಕ್ಷ್ಮೀ ನಾರಾಯಣ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಹಿಂದೂ ಆರ್ಯ ವೈಶ್ಯ ಸಮಾಜದ ವತಿಯಿಂದ ನಡೆದ ಈ ಪೂಜಾ ಕಾರ್ಯಕ್ರಮದಲ್ಲಿ ಸುಮಾರು 132 ಮುತ್ತೈದೆಯರಿಗೆ ಉಡಿ ತುಂಬಲಾಯಿತು.



> "ಹಿಂದೂಗಳನ್ನು ಒಗ್ಗೂಡಿಸುವ ಮೂಲ ಉದ್ದೇಶದಿಂದ ಬೃಹತ್ ಹಿಂದೂ ಸಮಾವೇಶ ನಡೆಯುತ್ತಿದೆ. ಕನ್ಹೇರಿ ಮಠದ ಕಾಡಸಿದ್ದೇಶ್ವರ ಶ್ರೀಗಳು ಪ್ರಥಮ ಬಾರಿಗೆ ಗದಗ ನಗರಕ್ಕೆ ಆಗಮಿಸುತ್ತಿದ್ದು, ಅವರ ಹಿಂದುತ್ವದ ನುಡಿಗಳನ್ನು ಆಲಿಸಲು ನಾವೆಲ್ಲರೂ ಕಾತುರದಿಂದ ಕಾಯುತ್ತಿದ್ದೇವೆ."
> – **ರೇಖಾ ಜಡಿ,** ಮಹಿಳಾ ಸಂಚಾಲಕಿ

ಕನ್ನಿಕಾ ರಾಯಚೂರ ಹಾಗೂ ಮಾಧುರಿ ರಾಯಚೂರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಿತು.

"ಸನಾತನ ಧರ್ಮ ಉಳಿಸುವ ಹಾಗೂ ರೈತಾಪಿ ವರ್ಗದವರ ಹಿತ ಕಾಪಾಡುವ ಉದ್ದೇಶದಿಂದ ಈ ಬೃಹತ್ ಸಮಾವೇಶ ಆಯೋಜಿಸಲಾಗಿದೆ. ಕಳೆದ ಹತ್ತು ವರ್ಷಗಳಿಂದಲೇ ಹಿಂದೂ ಮಠಗಳಿಂದಲೇ ಹಿಂದೂ ಧರ್ಮಕ್ಕೆ ಧಕ್ಕೆ ತರುವ ಕುತಂತ್ರಗಳು ನಡೆಯುತ್ತಿವೆ. ಇದರ ವಿರುದ್ಧ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ" ಎಂದು ವಿಜಯಲಕ್ಷ್ಮೀ ಮಾನ್ವಿ ಹೇಳಿದರು.

ಮೇ 31ರಂದು ಮಧ್ಯಾಹ್ನ 3.30ಕ್ಕೆ ನಗರದ ಭೂಮರೆಡ್ಡಿ ಸರ್ಕಲ್‌ನಿಂದ 2000ಕ್ಕೂ ಹೆಚ್ಚು ಮಹಿಳೆಯರ ಕುಂಭ ಮೆರವಣಿಗೆ ಆರಂಭವಾಗಲಿದ್ದು, ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಸಂಜೆ 5.30ಕ್ಕೆ ವ್ಹಿ.ಡಿ.ಎಸ್.ಟಿ.ಸಿ ಮೈದಾನ ತಲುಪಲಿದೆ ಎಂದು ಮಾಹಿತಿ ನೀಡಿದರು.

ಸಮಾವೇಶದಲ್ಲಿ 25ರಿಂದ 30 ಸಾವಿರಕ್ಕೂ ಹೆಚ್ಚು ಹಿಂದೂ ಬಾಂಧವರು ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಈ ವೇಳೆ ಅನಿತಾ ಹೆಬಸೂರ, ದೀಪಾ ಬಳ್ಳಾರಿ, ಸುಧಾ ಮುತ್ತಗಿ, ಕಲಾವತಿ ಅಬಲೂರ್, ವೇಧಾ ಕಾಲವಾಡ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಹಿಂದೂ–ಮುಸ್ಲಿಂ ಭಾವೈಕ್ಯತೆಗೆ ನರೇಗಲ್ಲ ಮಾದರಿ**

# ಸೌಹಾರ್ದದ ಸಂದೇಶ ಸಾರಿದ ಬಕ್ರೀದ್ ಶಾಂತಿ ಸಭೆ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬಕ್ರೀದ್ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಪರಸ್ಪರ ಸಹಕಾರದಿಂದ ಆಚರಿಸುವ ನಿಟ್ಟಿನಲ್ಲಿ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಶುಕ್ರವಾರ ಶಾಂತಿ ಸಭೆ ನಡೆಯಿತು.

ಸಭೆಯ ಅಧ್ಯಕ್ಷತೆಯನ್ನು ಸಿಪಿಐ ವಿಜಯಕುಮಾರ ವಹಿಸಿದ್ದರು. ವಿವಿಧ ಧರ್ಮಗಳ ಮುಖಂಡರು, ಗಣ್ಯರು ಹಾಗೂ ಸಾರ್ವಜನಿಕರು ಸಭೆಯಲ್ಲಿ ಭಾಗವಹಿಸಿ ಭಾವೈಕ್ಯತೆಯ ಸಂದೇಶ ಸಾರಿದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಎ.ಎ. ನವಲಗುಂದ, ನರೇಗಲ್ಲ ಪಟ್ಟಣದಲ್ಲಿ ಹಿಂದೂ–ಮುಸ್ಲಿಂ ಸಮುದಾಯದವರು ಪರಸ್ಪರ ಐಕ್ಯತೆಯಿಂದ ಎಲ್ಲ ಹಬ್ಬಗಳನ್ನು ಆಚರಿಸುತ್ತಿರುವುದು ವಿಶೇಷತೆ ಎಂದು ಹೇಳಿದರು.

ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ ಮಾತನಾಡಿ, ಹಬ್ಬಗಳು ಮನುಷ್ಯನ ಬದುಕಿಗೆ ಸಂತೋಷ ಮತ್ತು ನೆಮ್ಮದಿ ತರುವ ಸಾಂಸ್ಕೃತಿಕ ಸಂಭ್ರಮಗಳಾಗಿವೆ ಎಂದರು.

"ನರೇಗಲ್ಲ ಪಟ್ಟಣವು ಸದಾ ಸ್ನೇಹ, ಸೌಹಾರ್ದತೆ ಹಾಗೂ ಸಹಬಾಳ್ವೆಯ ಮೂಲಕ ಹಬ್ಬಗಳನ್ನು ಆಚರಿಸುತ್ತ ಬಂದಿದೆ. ಎಲ್ಲ ಧರ್ಮಗಳ ತಿರುಳು ಶಾಂತಿಯೇ ಆಗಿದ್ದು, ನಾವೆಲ್ಲರೂ ಒಂದೇ ಎಂಬ ಭಾವನೆಯಿಂದ ಬದುಕುತ್ತಿದ್ದೇವೆ" ಎಂದು ಹೇಳಿದರು.

ಪಿಎಸ್‌ಐ ಐಶ್ವರ್ಯ ನಾಗರಾಳ ಮಾತನಾಡಿ, ಸಾಮಾಜಿಕ ಜಾಲತಾಣಗಳಲ್ಲಿ ಹರಡುವ ಸುಳ್ಳು ಸುದ್ದಿಗಳಿಗೆ ಯಾರೂ




ಕಿವಿಗೊಡಬಾರದು ಎಂದು ಮನವಿ ಮಾಡಿದರು.

ಸತ್ಯಾಸತ್ಯತೆ ಪರಿಶೀಲಿಸದೆ ಯಾವುದೇ ಮಾಹಿತಿ ನಂಬಬಾರದು. ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದಲೇ ಶಾಂತಿ ಸಭೆ ಆಯೋಜಿಸಲಾಗಿದೆ ಎಂದು ಹೇಳಿದರು. ಸಿಪಿಐ ವಿಜಯಕುಮಾರ ಮಾತನಾಡಿ, ನರೇಗಲ್ಲ ಪಟ್ಟಣವು ಶಾಂತಿ–ಸೌಹಾರ್ದತೆಯ ಮೂಲಕ ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಭೆಯಲ್ಲಿ ಎಂ.ಐ. ಹೊಸಮನಿ, ಎಫ್.ಬಿ. ರೇವಡಿಗಾರ, ಎನ್.ಎಚ್. ಕುದರಿ, ಎ.ಎಫ್. ಕೊಪ್ಪದ, ಅಲ್ಲಾಬಕ್ಷಿ ನದಾಫ್, ಎಂ.ಆರ್. ನದಾಫ್, ಎಚ್.ಡಿ. ರಾಹುತ, ಡಿ.ಎಂ. ಹವಾಲ್ದಾರ, ಖಾದರಬಾಷಾ ಹೂಲಗೇರಿ, ಹನುಮಂತಪ್ಪ ದ್ವಾಸಲ್, ಶೇಖರಪ್ಪ ಕೆಂಗಾರ, ಯಮನೂರಪ್ಪ ದ್ವಾಸಲ್, ಎಸ್.ಜೆ. ಮೆಣಸಿಗಿ, ವೈ.ಎಸ್. ನವಲಗುಂದ, ಎಸ್.ಇ. ಮಡಿವಾಳರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಹೆಚ್ಚುತ್ತಿರುವ ವಾಹನ ದಟ್ಟಣೆ, ಅಪಘಾತಗಳ ಹಿನ್ನೆಲೆ ಪೊಲೀಸ್ ಇಲಾಖೆಗೆ ಸಾರ್ವಜನಿಕರ ಒತ್ತಾಯ**

# ಬೆಟಗೇರಿಗೆ ತುರ್ತು ಸಾರಿಗೆ ಪೊಲೀಸ್ ಠಾಣೆ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ-ಬೆಟಗೇರಿ ಭಾಗದಲ್ಲಿ ದಿನದಿಂದ ದಿನಕ್ಕೆ ವಾಹನ ಸಂಚಾರ ಹೆಚ್ಚುತ್ತಿದ್ದು, ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಬೆಟಗೇರಿಯಲ್ಲಿ ತಕ್ಷಣ ಸಾರಿಗೆ ಪೊಲೀಸ್ ಠಾಣೆ ಆರಂಭಿಸಬೇಕು ಎಂದು ಮುಖಂಡ ಸತೀಶ ಹುಲಿ ಒತ್ತಾಯಿಸಿದ್ದಾರೆ.

ಬೆಟಗೇರಿ ಭಾಗದಲ್ಲಿ ವಾಹನಗಳ ಉಪಟಳ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸ್ಥಳೀಯರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಹುಯಿಲಗೋಳ ಕ್ರಾಸ್, ಬೆಟಗೇರಿ ಬಸ್ ನಿಲ್ದಾಣ ಸೇರಿದಂತೆ ಹಲವು ಪ್ರದೇಶಗಳಲ್ಲಿ ಸಂಭವಿಸುತ್ತಿರುವ ಅಪಘಾತಗಳು ಹಾಗೂ ಸಾವಿನ ಪ್ರಕರಣಗಳು ಸಾರ್ವಜನಿಕರಲ್ಲಿ ಆತಂಕ ಮೂಡಿಸಿವೆ ಎಂದು ಅವರು ತಿಳಿಸಿದ್ದಾರೆ.

ಸಾರಿಗೆ ನಿಯಂತ್ರಣದ ಸಮರ್ಪಕ ವ್ಯವಸ್ಥೆಯ ಕೊರತೆಯಿಂದ ಅಪಘಾತಗಳ ಸಂಖ್ಯೆ ಹೆಚ್ಚುತ್ತಿರುವುದರಿಂದ ಬೆಟಗೇರಿ ಭಾಗಕ್ಕೆ ಪ್ರತ್ಯೇಕ ಸಾರಿಗೆ ಪೊಲೀಸ್ ಠಾಣೆ ಅಗತ್ಯವಾಗಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಜನಸಂಚಾರ ಮತ್ತು ವಾಹನ ದಟ್ಟಣೆಗೆ ಅನುಗುಣವಾಗಿ ಬೆಟಗೇರಿಗೆ ಸಾರಿಗೆ ಪೊಲೀಸ್ ಠಾಣೆ ಮಂಜೂರು ಮಾಡಬೇಕು ಎಂದು ಪತ್ರಿಕಾ ಪ್ರಕಟಣೆಯ ಮೂಲಕ ಆಗ್ರಹಿಸಲಾಗಿದೆ.

ಈ ಒತ್ತಾಯಕ್ಕೆ ಆರ್.ಎಲ್. ಮೇಲೆನ್ನವರ, ಮಹಾದೇವ ಚಲವಾದಿ, ಗುರುಮೂರ್ತಿ ಚಲವಾದಿ, ಬೂದಪ್ಪ ಹುಣಸೀಮರದ ಸೇರಿದಂತೆ ಸ್ಥಳೀಯರು ಬೆಂಬಲ ವ್ಯಕ್ತಪಡಿಸಿದ್ದಾರೆ.

**ಭಾರತೀಯ ಸಂಸ್ಕೃತಿಯ ಏಕತೆಯ ಸಂದೇಶ ಸಾರಿದ ತೋಂಟದ ಸಿದ್ಧರಾಮ ಶ್ರೀಗಳು**

# "ಸಹಬಾಳ್ವೆಯೇ ಭಾರತದ ನಿಜವಾದ ಸಂಸ್ಕೃತಿ"

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತವು ವೈವಿಧ್ಯಮಯ ದೇಶವಾಗಿದ್ದು, ವಿವಿಧ ಧರ್ಮ, ಜಾತಿ ಮತ್ತು ಆಚರಣೆಗಳ ನಡುವೆಯೂ "ನಾವೆಲ್ಲರೂ ಭಾರತೀಯರು, ನಾವೆಲ್ಲರೂ ಒಂದೇ" ಎಂಬ ಭಾವನೆ ಹೊಂದಿರುವುದು ಭಾರತೀಯತ್ವದ ನಿಜವಾದ ಸಂಕೇತ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ ವತಿಯಿಂದ ಆಯೋಜಿಸಿದ್ದ 2798ನೇ ಶಿವಾನುಭವ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಬಂಜಾರ ಸಮಾಜದ ಸಂಸ್ಕೃತಿ ಮತ್ತು ಆಚರಣೆಗಳು ವಿಶಿಷ್ಟ ಪರಂಪರೆಯನ್ನು ಹೊಂದಿವೆ ಎಂದು ಹೇಳಿದರು.

"ಬಂಜಾರ ಸಮುದಾಯದವರು ಮೂಲತಃ ಪ್ರಕೃತಿ ಆರಾಧಕರು. ಅವರ ಸಂಸ್ಕೃತಿ ಮತ್ತು ಜೀವನ ಶೈಲಿ ಬಹಳ ವೈಶಿಷ್ಟ್ಯಪೂರ್ಣವಾಗಿದೆ" ಎಂದು ಶ್ರೀಗಳು ಹೇಳಿದರು.

ಕರ್ನಾಟಕ ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ಅಧ್ಯಕ್ಷ ಡಾ. ಎಂ.ಆರ್. ಚವ್ಹಾಣ ಮಾತನಾಡಿ, "ಬಂಜಾರ ಸಮುದಾಯ ಇಡೀ ಏಷ್ಯಾ ಖಂಡದಾದ್ಯಂತ ವ್ಯಾಪಿಸಿಕೊಂಡಿರುವ ಸಮುದಾಯವಾಗಿದೆ" ಎಂದು ತಿಳಿಸಿದರು.

ಹೋರಾಟಗಾರ ರವಿಕಾಂತ್ ಅಂಗಡಿ ಮಾತನಾಡಿ, ಬಂಜಾರ ಸಮಾಜ ಮೂಲತಃ ಅಲೆಮಾರಿ ಜೀವನ ನಡೆಸುತ್ತಿದ್ದ ಸಮುದಾಯವಾಗಿದ್ದು, ಅನೇಕ ಶತಮಾನಗಳ ಕಾಲ ಆಧುನಿಕ ಜಗತ್ತಿನಿಂದ ದೂರವಿದ್ದು ಬದುಕು ಕಟ್ಟಿಕೊಂಡಿತ್ತು ಎಂದರು.



"ಗದಗ ಪ್ರದೇಶದಲ್ಲಿ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಬಂಜಾರ ಸಮಾಜಕ್ಕೆ ಅಕ್ಷರದ ಅರಿವು ಮೂಡಿಸಿ, ಅವರನ್ನು ಹೊರ ಜಗತ್ತಿಗೆ ಪರಿಚಯಿಸಿದ ಮಹನೀಯರು" ಎಂದು ಹೇಳಿದರು.

ಡಾ. ಬಿ.ಎಲ್. ಚೌಹಾಣ್ ಅವರು 'ಖೊಳಾ' ಗ್ರಂಥವನ್ನು ಪರಿಚಯಿಸಿ, "ಈ ಕೃತಿ ಬಂಜಾರರ ಅನನ್ಯ ಪರಂಪರೆಯನ್ನು ಅಚ್ಚುಕಟ್ಟಾಗಿ ನಿರೂಪಿಸುವ ಮಹತ್ವದ ಕೃತಿಯಾಗಿದೆ" ಎಂದು ತಿಳಿಸಿದರು.

ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಶ್ರೀಕಾಂತ್ ಜಾದವ ಮಾತನಾಡಿ, ಬಂಜಾರರ ಮೂಲ, ಅವರ ದೇಶವ್ಯಾಪಿ ವಲಸೆ ಹಾಗೂ ಸಂತ ಶ್ರೀ ಸೇವಾಲಾಲ ಮಹಾರಾಜರ ಕುರಿತು ವಿವರಿಸಿದರು.

"ಬಂಜಾರ ಸಮುದಾಯದ ಹಿರಿಮೆ-ಗರಿಮೆಯನ್ನು ಕಟ್ಟಿಕೊಡುವ ಕೊರಬೋಲಿ ಭಾಷೆಯಲ್ಲಿ ರಚಿತವಾಗಿರುವ ವಿಶೇಷ ಕೃತಿಯಿದು" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಡಾ. ನರೇಂದ್ರ ಪವಾರ, ಡಾ. ಕಿಶೋರ ಪವಾರ ಸೇರಿದಂತೆ ಬಂಜಾರ ಸಮುದಾಯದ ಅನೇಕ ಗಣ್ಯರು ಉಪಸ್ಥಿತರಿದ್ದರು.

ಆರಂಭದಲ್ಲಿ ಕುಮಾರಿ ಸಂಜನಾ ಎಂ. ಹದ್ಲಿ ಧರ್ಮಗ್ರಂಥ ಪಠಣ ನಡೆಸಿದರು.

> "ವೈವಿಧ್ಯತೆಯನ್ನು ಒಪ್ಪಿಕೊಂಡು ಸಹಬಾಳ್ವೆ ನಡೆಸುವುದು ಭಾರತೀಯ ಸಂಸ್ಕೃತಿಯ ಮಹತ್ವ. ಜಾತಿ-ಧರ್ಮಗಳ ಭಿನ್ನತೆಗಳಿಗಿಂತ ಮಾನವೀಯತೆ ಮತ್ತು ಭಾರತೀಯತ್ವವೇ ದೊಡ್ಡದು."
> – **ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು**

ಕುಮಾರಿ ಸನ್ನಿಧಿ ಎಂ. ಹದ್ಲಿ ವಚನ ಚಿಂತನ ಕಾರ್ಯಕ್ರಮ ನಡೆಸಿಕೊಟ್ಟರು. ಮೃತ್ಯುಂಜಯ ಹಿರೇಮಠ ಹಾಗೂ ಸಂಗಡಿಗರು ವಚನ ಸಂಗೀತ ಕಾರ್ಯಕ್ರಮ ನೆರವೇರಿಸಿದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ಬಂಜಾರ ಸಮಾಜದ ವಿದ್ಯಾರ್ಥಿಗಳನ್ನು ಇದೇ ವೇಳೆ ಸನ್ಮಾನಿಸಲಾಯಿತು.

ಡಾ. ರಮೇಶ್ ಎಂ. ಕಲ್ಲನಗೌಡರ ಕಾರ್ಯಕ್ರಮ ನಿರೂಪಿಸಿದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ ಸ್ವಾಗತಿಸಿದರು. ಉಪಾಧ್ಯಕ್ಷ ಡಾ. ಪ್ರಭು ಗಂಜಿಹಾಳ, ಶ್ರೀಮತಿ ಸುರೇಖಾ ಪಿಳ್ಳಿ, ಕಾರ್ಯದರ್ಶಿ ಸಿದ್ದರಾಮ ಪಟ್ಟೇದ, ಸಹಕಾರ್ಯದರ್ಶಿ ಪ್ರತಿಭಾ ಮು. ಬಡ್ನಿ, ಕೋಶಾಧ್ಯಕ್ಷ ವೀರಣ್ಣ ಗೋಟಡಕಿ, ಕೆ.ಎಸ್. ಕೋರಿಮಠ, ಸೋಮಶೇಖರ ಪುರಾಣಿಕಮಠ, ಆದೇಶ ಅಂಗಡಿ ಸೇರಿದಂತೆ ಶ್ರೀಮಠದ ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

**ಹೆಚ್ಚುವರಿ ವಿದ್ಯುತ್ ಬಿಲ್ ವಿರುದ್ಧ ನೇಕಾರರ ಆಕ್ರೋಶ; ಹೆಸ್ಕಾಂ ಅಧಿಕಾರಿಗಳಿಗೆ ಮನವಿ**

# "ಉಚಿತ ವಿದ್ಯುತ್ ಘೋಷಿಸಿ ಬಿಲ್ ಏಕೆ?"

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿಯ ವಿದ್ಯುತ್ ಚಾಲಿತ ಮಗ್ಗಗಳಿಗೆ ಸರ್ಕಾರ 10 ಹೆಚ್.ಪಿ ವರೆಗೆ ಉಚಿತ ವಿದ್ಯುತ್ ಯೋಜನೆ ಜಾರಿಗೊಳಿಸಿದ್ದರೂ, ಇತ್ತೀಚೆಗೆ ಹೆಚ್ಚುವರಿ ವಿದ್ಯುತ್ ಬಿಲ್‌ಗಳು ಬರುತ್ತಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿ ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ವತಿಯಿಂದ ಹೆಸ್ಕಾಂ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.




ಮುಳಗುಂದ ನಾಕಾದ ಹೆಸ್ಕಾಂ ಮುಖ್ಯ ಕಾರ್ಯನಿರ್ವಾಹಕ ಅಭಿಯಂತರರಿಗೆ ಸಲ್ಲಿಸಿದ ಮನವಿಯಲ್ಲಿ, ವೃತ್ತಿಪರ ನೇಕಾರರಿಗೆ ಸರ್ಕಾರ ನೀಡಿರುವ ಉಚಿತ ವಿದ್ಯುತ್ ಸೌಲಭ್ಯವನ್ನು ಯಾವುದೇ ಷರತ್ತಿಲ್ಲದೆ ಸಂಪೂರ್ಣ ಜಾರಿಗೆ ತರಬೇಕು ಎಂದು ಆಗ್ರಹಿಸಲಾಯಿತು.

ಈ ವೇಳೆ ಮಾತನಾಡಿದ ರಾಜು ಢಡಿ, ಗದಗ-ಬೆಟಗೇರಿ ಸೇರಿದಂತೆ ರಾಜ್ಯದ ಎಲ್ಲ ವೃತ್ತಿಪರ ನೇಕಾರರಿಗೆ 10 ಹೆಚ್.ಪಿ ವರೆಗೆ ಉಚಿತ ವಿದ್ಯುತ್ ನೀಡುವಂತೆ ಸರ್ಕಾರ ಆದೇಶ ಹೊರಡಿಸಿದೆ ಎಂದು ಹೇಳಿದರು.

10 ಹೆಚ್.ಪಿ ಮೀರಿದ ವಿದ್ಯುತ್ ಚಾಲಿತ ಮಗ್ಗಗಳಿಗೆ ಮಾತ್ರ ಪ್ರತಿ ಯೂನಿಟ್‌ಗೆ 1 ರೂಪಾಯಿ 25 ಪೈಸೆ ದರ ನಿಗದಿಯಾಗಿದೆ. ಆದರೆ ಇತ್ತೀಚೆಗೆ 10 ಹೆಚ್.ಪಿ ವ್ಯಾಪ್ತಿಯ ಮಗ್ಗ ಘಟಕಗಳಿಗೂ ಹಣ ಪಾವತಿಸುವಂತೆ ಬಿಲ್‌ಗಳು ಬರುತ್ತಿವೆ ಎಂದು ದೂರಿದರು.

"ಸರ್ಕಾರ ಕೊಟ್ಟು ಕಿತ್ತುಕೊಳ್ಳುವ ನೀತಿ ಅನುಸರಿಸಬಾರದು. ರಾಜ್ಯದ ವಿದ್ಯುತ್ ಚಾಲಿತ ಮಗ್ಗಗಳಿಗೆ ಯಾವುದೇ ಹೆಚ್ಚುವರಿ ಶುಲ್ಕ ವಿಧಿಸದೆ ಸಂಪೂರ್ಣ ಉಚಿತ ಜೀರೋ ಬಿಲ್ ನೀಡಬೇಕು" ಎಂದು ಒತ್ತಾಯಿಸಿದರು.

ಇನ್ನು ಮುಂದೆ ಹೆಸ್ಕಾಂ ಇಲಾಖೆಯಿಂದ ಹಣ ಪಾವತಿಸುವಂತೆ ಬಿಲ್‌ಗಳು ಬಂದರೆ ಅದಕ್ಕೆ ಸರ್ಕಾರವೇ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ನೇಕಾರರು ಯಾವುದೇ ಹಣ ಪಾವತಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ವಿರುಪಾಕ್ಷಪ್ಪ ಐಲಿ, ನಗರಸಭಾ ಸದಸ್ಯ ಮಾಧುಸಾ ಮೇರವಾಡೆ, ನಾರಾಯಣಪ್ಪ, ಕೃಷ್ಣ ಕೊಪ್ಪರದ, ಈರಣ್ಣ ಕೋನಾ, ನಾರಾಯಣ ಗೋಟೂರ, ಬಸವರಾಜ ಕರಿ, ಟಿ.ಎಂ. ಮೇರವಾಡೆ, ಪಿ.ಸಿ. ಹೀನಾಯಿ, ರಾಘವೇಂದ್ರ ಕಿನಿಲಿ, ನಾರಾಯಣ ಎಸ್. ಜುಟ್ಲಾ, ವೆಂಕಟೇಶ ಸಿಂಪಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜಂಗಮ ಸಮಾಜದ ಪ್ರತಿಭಾವಂತರಿಗೆ ಇಂದು ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ಜಂಗಮ ಸೇವಾ ಸಮಿತಿ ಹಾಗೂ ನರಸಾಪೂರದ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕ ಪಡೆದ ಜಂಗಮ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಮೇ 24ರಂದು ಬೆಳಿಗ್ಗೆ 10 ಗಂಟೆಗೆ ನಗರದ ಮುಳಗುಂದ ನಾಕಾ ಬಳಿಯ ಶ್ರೀ ಕುಮಾರೇಶ್ವರ ಧಾರ್ಮಿಕ ಪಾಠಶಾಲೆಯಲ್ಲಿ ನಡೆಯಲಿದೆ.

ಇದೇ ಸಂದರ್ಭದಲ್ಲಿ ಅಧಿಕ ಮಾಸದ ಅಂಗವಾಗಿ ಜಂಗಮ ಸಮಾಜದ 33 ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮವೂ ಆಯೋಜಿಸಲಾಗಿದೆ.

ಕಾರ್ಯಕ್ರಮಕ್ಕೆ ವೆಂಕಟಾಪೂರ-ಜಿಗೇರಿಯ ಗುರು ಸಿದ್ದೇಶ್ವರ ಶಿವಾಚಾರ್ಯರು, ಅಡ್ನೂರು-ರಾಜೂರು ಬ್ರಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ ಹಾಗೂ ಮಲ್ಲಸಮುದ್ರ ಓಂಕಾರೇಶ್ವರ ಮಠದ ಫಕೀರೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ.

ಕದಾಂಪೂರ ಹಿರೇಮಠದ ಡಾ. ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಕಾರ್ಯಕ್ರಮದ ನೇತೃತ್ವ ವಹಿಸಲಿದ್ದಾರೆ. ಗಜೇಂದ್ರಗಡದ ಕಾಲಜ್ಞಾನ ಸ್ವಾಮೀಜಿ, ಶ್ರೀ ಕುಮಾರೇಶ್ವರ ಧಾರ್ಮಿಕ ಪಾಠಶಾಲೆಯ ಶಿವಕುಮಾರ ದೇವರು, ನರಸಾಪೂರ ವೀರೇಶ್ವರ ಶರಣರ ಮಠದ ಶಿವಕುಮಾರ ಶರಣರು ಹಾಗೂ ಹೊಸಳ್ಳಿಮಠದ ಮಹೇಶ್ವರಯ್ಯ ಸ್ವಾಮಿಗಳು ಸಮ್ಮುಖ ವಹಿಸಲಿದ್ದಾರೆ ಎಂದು ಸಮಿತಿಯ ಅಧ್ಯಕ್ಷ ಪ್ರಭಯ್ಯ ದಂಡಾವತಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಿದ್ಧರಾಮಯ್ಯ ವಿರುದ್ಧ ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ವಾಗ್ದಾಳಿ**

# ಪೆಟ್ರೋಲ್-ಡೀಸೆಲ್ ತೆರಿಗೆ ವಿಚಾರದಲ್ಲಿ ಸಿಎಂ ಡಬಲ್ ಸ್ಟ್ಯಾಂಡ್






■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆಯಿಂದ ಜನಸಾಮಾನ್ಯರು ಸಂಕಷ್ಟಕ್ಕೆ ಸಿಲುಕಿರುವ ಸಂದರ್ಭದಲ್ಲಿ, ತೆರಿಗೆ ಕಡಿತ ಕುರಿತು ಪ್ರಶ್ನಿಸಿದ ಮಾಧ್ಯಮಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ನೀಡಿರುವ ಪ್ರತಿಕ್ರಿಯೆ ಬೇಜವಾಬ್ದಾರಿಯಾಗಿದೆ ಎಂದು ಬಿಜೆಪಿ ಮುಖಂಡ ಹಾಗೂ ಉದ್ಯಮಿ ವಿಜಯಕುಮಾರ ಗಡ್ಡಿ ಟೀಕಿಸಿದ್ದಾರೆ.

> "ತೆರಿಗೆ ಇಳಿಸುವ ಅಧಿಕಾರ ರಾಜ್ಯ ಸರ್ಕಾರಕ್ಕೇ ಇದೆ. ಪ್ರಧಾನಿ ಮೋದಿ ಅವರನ್ನು ಟೀಕಿಸುವ ಬದಲು ಸಿದ್ಧರಾಮಯ್ಯ ಜನರ ಮೇಲಿನ ಹೊರೆ ಕಡಿಮೆ ಮಾಡಲಿ."
> – **ವಿಜಯಕುಮಾರ ಗಡ್ಡಿ**, ಬಿಜೆಪಿ ಮುಖಂಡ

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, "ಪೆಟ್ರೋಲ್-ಡೀಸೆಲ್ ತೆರಿಗೆ ಕುರಿತು ಪ್ರಶ್ನಿಸಿದಾಗ ಪ್ರಧಾನಿ ನರೇಂದ್ರ ಮೋದಿ ಅವರನ್ನು ಕೇಳಿ ಎನ್ನುವ ಮೂಲಕ ಮುಖ್ಯಮಂತ್ರಿ ಸಿದ್ಧರಾಮಯ್ಯ ಡಬಲ್ ಸ್ಟ್ಯಾಂಡ್ ರಾಜಕಾರಣ ಮಾಡುತ್ತಿದ್ದಾರೆ" ಎಂದು ಆರೋಪಿಸಿದರು.

2021ರಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ, "ತಮಿಳುನಾಡು ಸರ್ಕಾರದ ಮಾದರಿಯಲ್ಲಿ ಪೆಟ್ರೋಲ್-ಡೀಸೆಲ್ ತೆರಿಗೆ ಕಡಿಮೆ ಮಾಡಬೇಕು. ನಮ್ಮ ಪಕ್ಷ ಅಧಿಕಾರದಲ್ಲಿದ್ದರೆ ಕನಿಷ್ಠ 10 ರೂಪಾಯಿ ತೆರಿಗೆ ಇಳಿಸುತ್ತಿದ್ದೆ" ಎಂದು ಸಿದ್ಧರಾಮಯ್ಯ ಟ್ವೀಟ್ ಮಾಡಿದ್ದರು. ಇದೀಗ ಅವರದೇ ಸರ್ಕಾರ ಅಧಿಕಾರದಲ್ಲಿದ್ದರೂ ತೆರಿಗೆ ಕಡಿಮೆ ಮಾಡದೇ ಜನರ ಜೇಬಿಗೆ ಕತ್ತರಿ ಹಾಕುತ್ತಿದ್ದಾರೆ ಎಂದು ಗಡ್ಡಿ ಟೀಕಿಸಿದರು.

ರಾಜ್ಯದ ಜನಸಾಮಾನ್ಯರ ಮೇಲೆ ನಿಜವಾದ ಕಾಳಜಿ ಇದ್ದರೆ ಮುಖ್ಯಮಂತ್ರಿ ಸಿದ್ಧರಾಮಯ್ಯ ತಕ್ಷಣವೇ ರಾಜ್ಯ ತೆರಿಗೆ ಇಳಿಸಿ ತೋರಿಸಬೇಕು. ತೆರಿಗೆ ಇಳಿಸುವ ಅಧಿಕಾರ ರಾಜ್ಯ ಸರ್ಕಾರಕ್ಕೇ ಇದೆ ಎಂಬುದು ಜನರಿಗೆ ಗೊತ್ತಿಲ್ಲ ಎಂದು ಅವರು ಭಾವಿಸಿರುವುದು ಸರಿಯಲ್ಲ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳನ್ನು ನಿರ್ವಹಿಸಲು ಸರ್ಕಾರ ವಿವಿಧ ರೀತಿಯಲ್ಲಿ ತೆರಿಗೆ ಹೊರೆ ಹಾಕುತ್ತಿದೆ ಎಂಬ ಆರೋಪ ಮಾಡಿರುವ ಗಡ್ಡಿ, ಬಿಜೆಪಿ ಆಡಳಿತವಿರುವ ಹಲವು ರಾಜ್ಯಗಳಲ್ಲಿ ಪೆಟ್ರೋಲ್-ಡೀಸೆಲ್ ದರ ಕಡಿಮೆ ಇದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ಧರಾಮಯ್ಯ ಮಾತುಮಾತಿಗೂ ಪ್ರಧಾನಿ ಮೋದಿ ಅವರನ್ನು ಟೀಕಿಸುವ ಚಾಳಿಯನ್ನು ಬಿಡಬೇಕು ಎಂದು ಅವರು ಆಗ್ರಹಿಸಿದರು.

**ಪೆಟ್ರೋಲ್, ಡೀಸೆಲ್, ಗ್ಯಾಸ್ ದರ ಏರಿಕೆ ಖಂಡಿಸಿ ಸಿಪಿಐ(ಎಂ) ಪ್ರತಿಭಟನೆ**

# ಬೆಲೆ ಏರಿಕೆಯಿಂದ ಜನರ ಬದುಕು ಸಂಕಷ್ಟಕ್ಕೆ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪೆಟ್ರೋಲ್, ಡೀಸೆಲ್ ಹಾಗೂ ಗ್ಯಾಸ್ ಬೆಲೆ ಏರಿಕೆ ಖಂಡಿಸಿ ಸಿಪಿಐ(ಎಂ) ಪಕ್ಷದ ವತಿಯಿಂದ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.




ಕೇಂದ್ರ ಸರ್ಕಾರ ವಾರದಲ್ಲೇ ಮೂರು ಬಾರಿ ಇಂಧನ ದರ ಹೆಚ್ಚಿಸಿರುವುದನ್ನು ಖಂಡಿಸಿದ ಪ್ರತಿಭಟನಾಕಾರರು, ಬೆಲೆ ಏರಿಕೆ ನೀತಿಯಿಂದ ಜನಸಾಮಾನ್ಯರ ಬದುಕು ಸಂಕಷ್ಟಕ್ಕೆ ಸಿಲುಕಿದೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಮುಖಂಡರು, ದೇಶದಲ್ಲಿ ಈಗಾಗಲೇ ದುಡಿಯುವ ವರ್ಗದ ಜನರು ಆರ್ಥಿಕ ಸಂಕಷ್ಟ ಅನುಭವಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಪೆಟ್ರೋಲ್, ಡೀಸೆಲ್ ಮತ್ತು ಗ್ಯಾಸ್ ದರ ಹೆಚ್ಚಿಸಿರುವುದು "ಗಾಯದ ಮೇಲೆ ಬರೆ ಎಳೆದಂತಾಗಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಐದು ರಾಜ್ಯಗಳ ಚುನಾವಣೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಇಂಧನಕ್ಕೆ ಯಾವುದೇ ಕೊರತೆ ಇಲ್ಲ ಎಂದು ಹೇಳಿದ್ದರು. ಆದರೆ ಚುನಾವಣಾ ಫಲಿತಾಂಶ ಹೊರಬಿದ್ದ ತಕ್ಷಣವೇ ತೈಲ ಬೆಲೆ ಏರಿಕೆ ಮಾಡಿರುವುದು ಜನ ವಿರೋಧಿ ಕ್ರಮವಾಗಿದೆ ಎಂದು ಟೀಕಿಸಿದರು.

ಅಮೆರಿಕಾ-ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧ ಪರಿಸ್ಥಿತಿಯಲ್ಲಿ ಭಾರತ ಸರ್ಕಾರ ಸಮರ್ಪಕ ವಿದೇಶಾಂಗ ನೀತಿ ಅನುಸರಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.


ವಿಶ್ವದ ಹಲವು ರಾಷ್ಟ್ರಗಳು ತಮ್ಮ ನಾಗರಿಕರ ಹಿತದೃಷ್ಟಿಯಿಂದ ತೈಲ ಬೆಲೆ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳುತ್ತಿವೆ. ಆದರೆ ಭಾರತದಲ್ಲಿ ಕೇಂದ್ರ ಸರ್ಕಾರ ನಿರಂತರವಾಗಿ ಬೆಲೆ ಏರಿಕೆಯ ಹೊರೆಯನ್ನು ಜನರ ಮೇಲೆ ಹಾಕುತ್ತಿದೆ ಎಂದು ದೂರಿದರು.

ಜನರ ಮೇಲಿನ ಆರ್ಥಿಕ ಒತ್ತಡ ಕಡಿಮೆ ಮಾಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಇಂಧನದ ಮೇಲೆ ವಿಧಿಸಿರುವ ಹೆಚ್ಚುವರಿ ತೆರಿಗೆಗಳನ್ನು ಕೂಡಲೇ ಕಡಿತಗೊಳಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯ ನೇತೃತ್ವವನ್ನು ತಾಲೂಕು ಕಾರ್ಯದರ್ಶಿ ಬಿ. ಮಳಮ್ಮ ವಹಿಸಿದ್ದರು. ಜಿಲ್ಲಾ ಮುಖಂಡ ಆರ್.ಎಸ್. ಬಸವರಾಜ್, ತಾಲೂಕು ಮುಖಂಡರಾದ ಎಸ್. ಜಗನ್ನಾಥ್, ಎಂ. ಆನಂದ್, ಕೆ. ಗಾಳೆಪ್ಪ, ಕೆ. ರಮೇಶ್, ಕೆ. ಅಂಜಿನಮ್ಮ, ಪಿ. ಚಂದಬೀ, ಜಿ. ರಮೇಶ್, ಕೆ. ರಾಮಣ್ಣ, ದುರುಗಮ್ಮ, ರಂಗಪ್ಪ ದಾಸರ, ಕರಿಬಸಮ್ಮ ಸೇರಿದಂತೆ ಹಲವರು ಭಾಗವಹಿಸಿದ್ದರು.

## ನಿಧನ

### ಮಲ್ಲಪ್ಪ ವಾಲಿ



ಲಕ್ಷ್ಮೇಶ್ವರ: ಪಟ್ಟಣದ ವಿನಾಯಕ ನಗರದ ಹಿರಿಯ ನಿವಾಸಿ, ನಿವೃತ್ತ ಶಿಕ್ಷಕರಾದ ಮಲ್ಲಪ್ಪ ವಿ ವಾಲಿ(85) ಇವರು ಶುಕ್ರವಾರ ಸಂಜೆ ನಿಧನರಾದರು.

ಮೃತರಿಗೆ ಪತ್ನಿ, ಮೂವರು ಪುತ್ರರು, ಮೂವರು ಪುತ್ರಿಯರು ಸೇರಿ ಅಪಾರ ಬಂಧು ಬಳಗವಿದೆ.

**ರಸಗೊಬ್ಬರದಿಂದ ಬೆಳೆವಿಮೆವರೆಗೆ ವಿವಿಧ ಬೇಡಿಕೆಗಳ ಈಡೇರಿಕೆಗೆ ರೈತ ಸಂಘ-ಹಸಿರು ಸೇನೆಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ**

# ರೈತನ ಕಣ್ಣೀರಿಗೆ ಸರ್ಕಾರ ಸ್ಪಂದಿಸಲಿ

■ವಿಜಯಸಾಕ್ಷಿ ಸುದ್ದಿ, ಗದಗ

ರೈತರು ಎದುರಿಸುತ್ತಿರುವ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಿ, ಕೃಷಿ ವಲಯದ ಸಮಗ್ರ ಅಭಿವೃದ್ಧಿಗೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾ ಮತ್ತು ತಾಲೂಕು ಘಟಕದ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜಿಲ್ಲಾಧ್ಯಕ್ಷ ಶಂಕರಗೌಡ ಜಾಯನಗೌಡರ ನೇತೃತ್ವದಲ್ಲಿ ಮನವಿ ಸಲ್ಲಿಸಿದ ರೈತ ಮುಖಂಡರು, ರೈತರ ಬದುಕು ಸಂಕಷ್ಟಕ್ಕೆ ಸಿಲುಕಿದ್ದು ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಸಂಘದ ಮುಖಂಡರು ಮಾತನಾಡಿ, ಎಫ್‌ಐಡಿ ಮೂಲಕ ನಡೆಯುತ್ತಿರುವ ರಸಗೊಬ್ಬರ ವಿತರಣೆಯಿಂದ ರೈತರಿಗೆ ತೊಂದರೆಯಾಗುತ್ತಿದೆ.

ಈ ಪದ್ಧತಿಯನ್ನು ರದ್ದುಪಡಿಸಿ, ರೈತರಿಗೆ ಯಾವುದೇ ಮಧ್ಯವರ್ತಿತನವಿಲ್ಲದೆ ಸಂಪೂರ್ಣ ಪ್ರಮಾಣದ ರಸಗೊಬ್ಬರವನ್ನು ನೇರವಾಗಿ ಪೂರೈಸಬೇಕು ಎಂದು ಆಗ್ರಹಿಸಿದರು.

ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ನೀಡುವ ಖರೀದಿ ಕೇಂದ್ರಗಳನ್ನು ವರ್ಷಪೂರ್ತಿ ತೆರೆಯಬೇಕು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ರೈತರ ಅನುಕೂಲಕ್ಕಾಗಿ ಸುಸಜ್ಜಿತ ಗೋದಾಮುಗಳನ್ನು ನಿರ್ಮಿಸಬೇಕು ಎಂದು ಮನವಿ ಮಾಡಿದರು.



ದೇಸಿ ಹಸು ಸಾಕಾಣಿಕೆ ಉತ್ತೇಜಿಸಲು ಸರ್ಕಾರ ವಿಶೇಷ ಪ್ರೋತ್ಸಾಹಧನ ಘೋಷಿಸಬೇಕು. ರೈತರ ಬೆಳೆಗಳನ್ನು ನಾಶಪಡಿಸುತ್ತಿರುವ ಮಂಗಗಳು ಹಾಗೂ ಇತರೆ ಕಾಡುಪ್ರಾಣಿಗಳ ಹಾವಳಿಯನ್ನು ನಿಯಂತ್ರಿಸಲು ಅರಣ್ಯ ಇಲಾಖೆ ತಕ್ಷಣ ಕ್ರಮ ಕೈಗೊಂಡು ಅವುಗಳನ್ನು ಸುರಕ್ಷಿತ ಅರಣ್ಯ ಪ್ರದೇಶಗಳಿಗೆ ಸ್ಥಳಾಂತರಿಸಬೇಕು ಎಂದು ಒತ್ತಾಯಿಸಿದರು.

ಫಸಲು ಭೀಮಾ ಯೋಜನೆಯಡಿ ಸ್ಯಾಟಲೈಟ್ ಹಾಗೂ ಬಯೋಮೆಟ್ರಿಕ್ ಸರ್ವೇ ಮೂಲಕ ವೈಜ್ಞಾನಿಕ ರೀತಿಯಲ್ಲಿ ಬೆಳೆಹಾನಿ ಸಮೀಕ್ಷೆ ನಡೆಸಿ, ಅರ್ಹ ರೈತರಿಗೆ ತಕ್ಷಣ ಬೆಳೆ ವಿಮೆ ಮಂಜೂರು ಮಾಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಯಿತು.

ಮಾರುಕಟ್ಟೆಯಲ್ಲಿ ಕಳಪೆ ಬೀಜಗಳ ಮಾರಾಟ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಂಡು ರೈತರಿಗೆ ಉತ್ತಮ ಗುಣಮಟ್ಟದ ಬೀಜಗಳನ್ನು ಪೂರೈಸಬೇಕು ಎಂದು ಹೇಳಿದರು.

"ನಮ್ಮ ಹೊಲ-ನಮ್ಮ ದಾರಿ" ಯೋಜನೆಯಡಿ ಪ್ರತಿ ರೈತನ ಜಮೀನಿಗೆ ಸಂಪರ್ಕ ರಸ್ತೆ ನಿರ್ಮಿಸಬೇಕು ಎಂಬ ಬೇಡಿಕೆಯನ್ನೂ ಮುಂದಿಟ್ಟರು.

ರಾತ್ರಿ ವೇಳೆ ನಡೆಯುವ ಹರಾಜು ಪ್ರಕ್ರಿಯೆಯಿಂದ ರೈತರ ಕಾಯಿಪಲ್ಲೆ ಮತ್ತು ಹಸಿ ಮಾಲುಗಳಿಗೆ ಹಂದಿ ಹಾಗೂ ಧನಕರುಗಳಿಂದ ಹಾನಿಯಾಗುತ್ತಿದೆ. ಆದ್ದರಿಂದ ಬೆಳಗಿನ ಜಾವ 6ರಿಂದ 9 ಗಂಟೆಯವರೆಗೆ ಹರಾಜು ಪ್ರಕ್ರಿಯೆ ನಡೆಸುವಂತೆ ಒತ್ತಾಯಿಸಿದರು.


> "ರೈತನಿಗೆ ನ್ಯಾಯ ಸಿಗದಿದ್ದರೆ ಕೃಷಿಯೇ ಸಂಕಷ್ಟಕ್ಕೆ ಸಿಲುಕುತ್ತದೆ. ಸರ್ಕಾರ ರೈತರ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ರಾಜ್ಯಾದ್ಯಂತ ಹೋರಾಟವನ್ನು ತೀವ್ರಗೊಳಿಸಲಾಗುವುದು."
> **–ಶಂಕರಗೌಡ ಜಾಯನಗೌಡರ,** ಜಿಲ್ಲಾಧ್ಯಕ್ಷರು, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ

ಬೇಡಿಕೆಗಳಿಗೆ ಸ್ಪಂದಿಸದಿದ್ದಲ್ಲಿ ಮೇ 25ರಂದು ಗದಗ ಕೃಷಿ ಮಾರುಕಟ್ಟೆ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ರೈತ ಮುಖಂಡರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಮಹಾದೇವ ವೆರ್ಣೇಕರ, ಆದರ್ಶ ಹುಲಗೂರು, ಗೂಳಪ್ಪ ಗುಡದೂರ, ಗಿರೀಶ್ ಹೊಸಮನಿ, ಅಂದಪ್ಪ ಅಂಗಡಿ, ರಾಮಣ್ಣ ಕಮ್ಮಾರ, ಶಂಕರಗೌಡ ಪಾಟೀಲ, ಶಿವಮೂರ್ತಿ ದೊಡ್ಡವಾಡ, ರಾಮನಗೌಡ ಪಾಟೀಲ, ಪ್ರವೀಣ ಕರ್ಜೆ, ಪ್ರಕಾಶ ಹಡಗಲಿ, ರವಿ ವಗ್ಗಣ್ಣವರ, ಬಸವರಾಜ ಮರಾಠಿ, ಸಂತೋಷ ಮಠದ, ಮಲ್ಲಪ್ಪ ಮಠದ ಸೇರಿದಂತೆ ಸಂಘಟನೆಯ ಅನೇಕ ಪದಾಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

# ಇಂದು ಬಸವದಳದ ಶರಣ ಸಂಗಮ

■ವಿಜಯಸಾಕ್ಷಿ ಸುದ್ದಿ, ಗದಗ



ಬಸವಾದಿ ಶರಣರ ವಚನ ಸಾಹಿತ್ಯದ ರಕ್ಷಣೆ ಪ್ರತಿಯೊಬ್ಬ ಬಸವ ಭಕ್ತನ ಹೊಣೆಗಾರಿಕೆಯಾಗಿದ್ದು, ವಚನ ಪರಂಪರೆಯ ಉಳಿವು ಸಮಾಜದ ಸಾಂಸ್ಕೃತಿಕ ಜಾಗೃತಿಗೆ ಅಗತ್ಯವಾಗಿದೆ ಎಂದು ಬಸವದಳ ತಿಳಿಸಿದೆ.

ನಗರದ ಶಿವಾನಂದ ನಗರದಲ್ಲಿರುವ ಬಸವ ಸಮುದಾಯ ಭವನದಲ್ಲಿ ಮೇ 24ರಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿರುವ ಬಸವದಳದ 1699ನೇ ಶರಣ ಸಂಗಮದಲ್ಲಿ "ಬಸವಾದಿ ಶರಣರ ವಚನ ಸಾಹಿತ್ಯ ರಕ್ಷಣೆ – ಬಸವ ಭಕ್ತರ ಹೊಣೆ" ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗಿದೆ.

ಇದೇ ವೇಳೆ ಶರಣೆ ಸಂಜೀವಿನಿ ಹಾಗೂ ಶರಣ ಮಾರುತಿ ಬಂಡಿವಡ್ಡರ (ಹೊಸೂರು) ಅವರ ವೈವಾಹಿಕ ಜೀವನದ ಬೆಳ್ಳಿಹಬ್ಬ ಆಚರಣೆ ಕಾರ್ಯಕ್ರಮವೂ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವದಳ ಗದಗ-ಬೆಟಗೇರಿ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸಲಿದ್ದಾರೆ.

ಶರಣ ಬಸವರಾಜ ವೆಂಕಟಾಪೂರ, ಶರಣ ತತ್ವ ಚಿಂತಕರು, ಬಸವ ಭವನ ಸಿರಗುಪ್ಪಾ ಹಾಗೂ ಶರಣೆ ಗಿರಿಜಕ್ಕ ಧರ್ಮರಡ್ಡಿ, ಶರಣ ಸಾಹಿತಿಗಳು, ಗದಗ ಅವರು ಉಪನ್ಯಾಸ ನೀಡಲಿದ್ದಾರೆ.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ಮನವಿ ಮಾಡಿದ್ದಾರೆ.

**ಅಧಿಕ ಮಾಸದ ಅಂಗವಾಗಿ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಭಕ್ತಿಭಾವದ ಕುಂಕುಮಾರ್ಚನೆ**

# "ಶ್ರೀ ದೇವಿಗೆ ಕುಂಕುಮಾರ್ಚನೆ ಶ್ರೇಷ್ಠ ಆಚರಣೆ"


■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಿಂದೂ ಧರ್ಮ ಸಂಸ್ಕೃತಿಯಲ್ಲಿ ಕುಂಕುಮಕ್ಕೆ ವಿಶಿಷ್ಟ ಮಹತ್ವವಿದ್ದು, ಶ್ರೀ ದೇವಿಗೆ ಅರ್ಪಿಸುವ ಕುಂಕುಮಾರ್ಚನೆ ಶ್ರೇಷ್ಠ ಆಚರಣೆಯಾಗಿದೆ ಎಂದು ನಿವೃತ್ತ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಅಧಿಕ ಮಾಸದ ನಿಮಿತ್ತ ಸುಮಂಗಲೆಯರು ಆಯೋಜಿಸಿದ್ದ ಕುಂಕುಮಾರ್ಚನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕುಂಕುಮವು ಭಾರತೀಯ ಸಂಸ್ಕೃತಿಯಲ್ಲಿ ಮಂಗಳದ ಸಂಕೇತವಾಗಿದೆ ಎಂದು ತಿಳಿಸಿದರು.

ಕುಂಕುಮವನ್ನು ಸಿಂಧೂರ ಹಾಗೂ ಕೇಸರಿ ಎಂದೂ ಕರೆಯಲಾಗುತ್ತದೆ. ಮಹಿಳೆಯರ ಹಣೆಯ ಮೇಲಿನ ಕುಂಕುಮವು ಸೌಭಾಗ್ಯದ ಸಂಕೇತವಾಗಿದ್ದು, ಬೈತಲೆಯ ಮೇಲೆ ಧರಿಸುವುದನ್ನು ಸಿಂಧೂರವೆಂದು ಕರೆಯಲಾಗುತ್ತದೆ ಎಂದು ಹೇಳಿದರು.

ಶುದ್ಧ ಕುಂಕುಮವನ್ನು ಅರಿಶಿಣ ಹಾಗೂ ಸುಣ್ಣದಿಂದ ಸಿದ್ಧಪಡಿಸಲಾಗುತ್ತದೆ. ಅದಕ್ಕಾಗಿ ಅರಿಶಿಣ-ಕುಂಕುಮವನ್ನು ಮಂಗಳ ದ್ರವ್ಯವೆಂದು ಪರಿಗಣಿಸಲಾಗುತ್ತಿದ್ದು, ಅನೇಕ ಶುಭ ಕಾರ್ಯಗಳಲ್ಲಿ ಅದರ ಬಳಕೆ ನಡೆಯುತ್ತಿದೆ ಎಂದು ವಿವರಿಸಿದರು. ಶ್ರೀ ದೇವಿಯ ಸಹಸ್ರನಾಮಾವಳಿ ಅಥವಾ ಲಲಿತಾ ಸಹಸ್ರನಾಮ ಪಠಿಸುತ್ತ ದೇವಿಯ ಭಾವಚಿತ್ರ ಅಥವಾ ಮೂರ್ತಿಗೆ ಕುಂಕುಮ ಅರ್ಪಿಸುವುದನ್ನು ಕುಂಕುಮಾರ್ಚನೆ ಎಂದು ಕರೆಯಲಾಗುತ್ತದೆ. ಈ ವ್ರತ ಆಚರಿಸುವ ಮಹಿಳೆಯರು ಅಖಂಡ ಸೌಭಾಗ್ಯ ಸೇರಿದಂತೆ ಅನೇಕ ಶುಭಫಲಗಳನ್ನು ಪಡೆಯುತ್ತಾರೆ ಎಂದು ಹೇಳಿದರು.



> "ಶ್ರೀ ದೇವಿಯ ನಾಮಾವಳಿ ಪಠಿಸುತ್ತ ಭಕ್ತಿಯಿಂದ ಅರ್ಪಿಸುವ ಕುಂಕುಮಾರ್ಚನೆ ಮಹಿಳೆಯರಿಗೆ ಅಖಂಡ ಸೌಭಾಗ್ಯ ಹಾಗೂ ಶುಭ ಫಲಗಳನ್ನು ನೀಡುತ್ತದೆ."
> **–ಅರುಣ ಕುಲಕರ್ಣಿ, ನಿವೃತ್ತ ಶಿಕ್ಷಕರು**

ದೇವಿಯ ವಾರಗಳಂದು ಹಾಗೂ ಶುಭ ದಿನಗಳಲ್ಲಿ ಶ್ರದ್ಧಾ-ಭಕ್ತಿಯಿಂದ ಶ್ರೀ ದೇವಿಯನ್ನು ಪೂಜಿಸಿ ಕುಂಕುಮಾರ್ಚನೆ ನೆರವೇರಿಸಬಹುದೆಂದರು.

ಕಾರ್ಯಕ್ರಮದ ನೇತೃತ್ವವನ್ನು ವಿಮಲಾಬಾಯಿ ಗ್ರಾಮಪುರೋಹಿತ ವಹಿಸಿದ್ದರು. ಸಂದರ್ಭದಲ್ಲಿ ಡಾ. ಸಪ್ನಾ ಕಾಳೆ, ಸಂಧ್ಯಾ ಕುಲಕರ್ಣಿ, ಜ್ಯೋತಿ ನಾಡಿಗೇರ, ಪರಿಮಳಾ ಗ್ರಾಮಪುರೋಹಿತ, ಶೋಭಾ ಸೂರ್ಯಭಟ್ಟನವರ, ಶೋಭಾ ಕುಲಕರ್ಣಿ, ಅನಿತಾ ಗ್ರಾಮಪುರೋಹಿತ, ಪ್ರತೀಕ್ಷಾ ಕುಲಕರ್ಣಿ, ವಾಣಿ ಕುಲಕರ್ಣಿ, ರೂಪಾ ಗ್ರಾಮಪುರೋಹಿತ, ಲಕ್ಷ್ಮೀ ಗ್ರಾಮಪುರೋಹಿತ, ಜಯಶ್ರೀ ಗ್ರಾಮಪುರೋಹಿತ, ವಿದ್ಯಾ ಹೆಗಡೆ, ದೀಪಾ ಕುಲಕರ್ಣಿ, ಸೀಮಾ ಕೊಂಡಿ, ಸುರೇಖಾ ದೇಶಪಾಂಡೆ, ರಾಜಶ್ರೀ ಕುಲಕರ್ಣಿ, ತೃಪ್ತಿ ಸರಾಫ್, ಭಾಗ್ಯಾಬಾಯಿ ಕಾಳೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆಗೆ ಸಾರ್ವಜನಿಕರ ಸಹಕಾರ ಅಗತ್ಯ**

# ಡೆಂಗ್ಯೂ ತಡೆಗೆ ಜನಜಾಗೃತಿಯೇ ರಾಮಬಾಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಜನರ ಸಹಕಾರ, ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆ ಹಾಗೂ ವ್ಯಾಪಕ ಜನಜಾಗೃತಿಯೊಂದೇ ಪರಿಣಾಮಕಾರಿ ಪರಿಹಾರವಾಗಿದೆ ಎಂದು ಜಿಲ್ಲಾ ಉಪ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಶಿರಹಟ್ಟಿ-ಲಕ್ಷ್ಮೇಶ್ವರ ಆಶ್ರಯದಲ್ಲಿ ನಗರದ ಬಾಪೂಜಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಗುರುವಾರ ಆಯೋಜಿಸಿದ್ದ "ಡೆಂಗ್ಯೂ ಅರಿವು ಕಾರ್ಯಕ್ರಮ"ದಲ್ಲಿ ಅವರು ಮಾತನಾಡಿದರು.

ಸೊಳ್ಳೆಗಳ ಜೀವನಚಕ್ರದ ಕುರಿತು ಲಾರ್ವಾ ಪ್ರಾತ್ಯಕ್ಷಿಕೆಯ ಮೂಲಕ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದ ಅವರು, ಪೂರ್ವ ಮುಂಗಾರು ಮಳೆ ಆರಂಭವಾಗಿರುವುದರಿಂದ ಅಲ್ಲಲ್ಲಿ ನಿಂತ ನೀರು ಹಾಗೂ ನೀರು ಶೇಖರಣಾ ಪಾತ್ರೆಗಳಲ್ಲಿ ಸೊಳ್ಳೆಗಳು ಹೆಚ್ಚಾಗಿ ಉತ್ಪತ್ತಿಯಾಗುತ್ತವೆ ಎಂದು ಹೇಳಿದರು.

ಈಡಿಸ್ ಸೊಳ್ಳೆ ಕಡಿತದಿಂದ ಡೆಂಗ್ಯೂ ಹಾಗೂ ಚಿಕೂನ್‌ಗುನ್ಯಾ ಹರಡುವ ಸಾಧ್ಯತೆ ಹೆಚ್ಚಿದ್ದು, ಜ್ವರ ಕಾಣಿಸಿಕೊಂಡ ತಕ್ಷಣ ಹತ್ತಿರದ ಆರೋಗ್ಯ ಕೇಂದ್ರಗಳಲ್ಲಿ ರಕ್ತ ಪರೀಕ್ಷೆ ಮಾಡಿಸಿ ಉಚಿತ ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದರು. ಮಲಗುವ ವೇಳೆ ಸೊಳ್ಳೆ ಪರದೆ ಬಳಸಬೇಕು. ಮನೆಯಲ್ಲಿರುವ ನೀರಿನ ಪರಿಕರಗಳನ್ನು ವಾರಕ್ಕೊಮ್ಮೆ ತಿಕ್ಕಿ ತೊಳೆದು ನೀರನ್ನು ಸುರಕ್ಷಿತವಾಗಿ ಮುಚ್ಚಿಡಬೇಕು. ಸೊಳ್ಳೆ ಕಡಿತದಿಂದ ದೂರವಿರಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.



> "ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ ಎಂಬುದು ಈ ವರ್ಷದ ಘೋಷವಾಕ್ಯ; ಡೆಂಗ್ಯೂ ನಿಯಂತ್ರಣಕ್ಕೆ ಸಮುದಾಯದ ಸಹಭಾಗಿತ್ವ ಅತ್ಯಗತ್ಯ."
> **–ಎಸ್.ಎಫ್. ಹನಕನಹಳ್ಳಿ,** ಆರೋಗ್ಯ ಶಿಕ್ಷಣಾಧಿಕಾರಿ

ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಎಫ್. ಹನಕನಹಳ್ಳಿ ಮಾತನಾಡಿ, ಈಡಿಸ್ ಲಾರ್ವಾ ಸಮೀಕ್ಷೆಗಾಗಿ ಮನೆಮನೆಗೆ ಭೇಟಿ ನೀಡುವ ಆರೋಗ್ಯ ಇಲಾಖೆ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರಿಗೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಜನರಿಗೆ ಆರೋಗ್ಯ ಸಿಬ್ಬಂದಿ ನೀಡುವ ಸಲಹೆಗಳನ್ನು ಪಾಲಿಸುವ ಮೂಲಕ ಡೆಂಗ್ಯೂ ನಿಯಂತ್ರಣಕ್ಕೆ ಕೈಜೋಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಕೆ. ನಾಗರಾಜಪ್ಪ ಹಾಗೂ ಸಿಬ್ಬಂದಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಫ್.ಬಿ. ಹೂಗಾರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಫ್.ಸಿ. ಹಿರೇಮಠ, ಆರೋಗ್ಯ ನಿರೀಕ್ಷಣಾಧಿಕಾರಿ ಜಿ.ಬಿ. ಬಣಗಾರ, ಕೆ.ಎಂ. ಕುಲಕರ್ಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಲಕ್ಷ್ಮೇಶ್ವರದಲ್ಲಿ ರಾಜ್ಯ ಮಟ್ಟದ ವಿಚಾರ ಸಂಕಿರಣ ಸಮಾರೋಪ; ಸಂಶೋಧನೆಗೆ ತಜ್ಞರ ಒತ್ತಾಯ**

# "ಪುಲಿಗೆರೆಯ ಇತಿಹಾಸ ಜಗತ್ತಿಗೆ ತಲುಪಬೇಕು"

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಂದಿನ ಪುಲಿಗೆರೆ, ಇಂದಿನ ಲಕ್ಷ್ಮೇಶ್ವರವು ಭವ್ಯ ಇತಿಹಾಸ, ಸಮೃದ್ಧ ಸಂಸ್ಕೃತಿ ಹಾಗೂ ತಿರುಳ ಕನ್ನಡ ಪರಂಪರೆಯನ್ನು ಹೊತ್ತ ನಾಡಾಗಿದ್ದು, ಇಲ್ಲಿನ ಶಾಸನಗಳು ಮತ್ತು ಸಾಹಿತ್ಯ ಸಂಪತ್ತಿನ ಕುರಿತು ಇನ್ನಷ್ಟು ಅಧ್ಯಯನ ಹಾಗೂ ಸಂಶೋಧನೆಗಳು ಅಗತ್ಯವಿವೆ ಎಂದು ನಾಡಿನ ಶಾಸನ ಸಂಶೋಧಕಿ ಡಾ. ಹನುಮಾಕ್ಷಿ ಗೋಗಿ ಅಭಿಪ್ರಾಯಪಟ್ಟರು.

ಪಟ್ಟಣದ ರಂಭಾಪುರಿ ಜಗದ್ಗುರು ಶ್ರೀ ವೀರಗಂಗಾಧರ ಕಲ್ಯಾಣ ಮಂಟಪದಲ್ಲಿ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ ಮೈಸೂರು, ಜಿಲ್ಲಾ ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತುಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ "ಪುಲಿಗೆರೆ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯ" ಕುರಿತ ಮೂರು ದಿನಗಳ ರಾಜ್ಯ ಮಟ್ಟದ ವಿಚಾರ ಸಂಕಿರಣದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಲಕ್ಷ್ಮೇಶ್ವರ ಪ್ರದೇಶವು ಶಾಸನಗಳ ತವರೂರಾಗಿದ್ದು, ಇಂದಿಗೂ ಪಟ್ಟಣದ ವ್ಯಾಪ್ತಿಯಲ್ಲಿ ನೂರಾರು ಶಾಸನಗಳು ಪತ್ತೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಪುಲಿಗೆರೆಯ ಇತಿಹಾಸ ಮತ್ತು ಸಾಹಿತ್ಯ ವೈಭವದ ಕುರಿತು ಆಳವಾದ ಸಂಶೋಧನೆಗಳು ನಡೆಯಬೇಕೆಂದು ಹೇಳಿದರು.



> "ಪುಲಿಗೆರೆಯ ಐತಿಹಾಸಿಕ ಶ್ರೀಮಂತಿಕೆಯನ್ನು ಮುಂದಿನ ತಲೆಮಾರಿಗೆ ದಾಟಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ."
> **– ವಿವೇಕಾನಂದಗೌಡ ಪಾಟೀಲ,** ಜಿಲ್ಲಾ ಕಸಾಪ ಅಧ್ಯಕ್ಷ

ಮುಖ್ಯ ಅತಿಥಿಯಾಗಿ ಮಾತನಾಡಿದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ವಿಚಾರ ಸಂಕಿರಣದಲ್ಲಿ ಮಂಡನೆಯಾದ ಸಂಶೋಧನಾ ಪ್ರಬಂಧಗಳನ್ನು ಕ್ರೋಢೀಕರಿಸಿ ಪುಸ್ತಕ ರೂಪದಲ್ಲಿ ಹೊರತರುವ ಅಗತ್ಯವಿದೆ ಎಂದು ಹೇಳಿದರು.

"ಪುಲಿಗೆರೆಯ ಐತಿಹಾಸಿಕ ಹಾಗೂ ಸಾಹಿತ್ಯ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕೆಲಸ ನಿರಂತರವಾಗಿ ನಡೆಯಬೇಕು" ಎಂದು ಅಭಿಪ್ರಾಯಪಟ್ಟರು.

ವಿಶ್ರಾಂತ ಪ್ರಾಧ್ಯಾಪಕ ಆರ್.ಎನ್. ಪಾಟೀಲ ಮಾತನಾಡಿ, ಪುಲಿಗೆರೆಯ ಐತಿಹಾಸಿಕ ಶ್ರೇಷ್ಠತೆಯನ್ನು ಜಗತ್ತಿಗೆ ಪರಿಚಯಿಸುವ ಕಾರ್ಯವನ್ನು ಲಕ್ಷ್ಮೇಶ್ವರದ ಪುರಸಭಾ ಕಲಾ ಮಹಾವಿದ್ಯಾಲಯ ಕಳೆದ ಐದು ದಶಕಗಳಿಂದ ಸಮರ್ಥವಾಗಿ ನಿರ್ವಹಿಸಿದೆ ಎಂದರು.

"ಪ್ರೊ. ಸದಾನಂದ ಕನವಳ್ಳಿ ಹಾಗೂ ಪ್ರೊ. ಸಿ.ವಿ. ಕೆರಿಮನಿ ಅವರಂತಹ ಹಿರಿಯ ಸಾಹಿತಿಗಳ ಕೊಡುಗೆಯನ್ನು ಈ ಸಂದರ್ಭದಲ್ಲಿ ಸ್ಮರಿಸಬೇಕು" ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ ಮೈಸೂರು ಯೋಜನಾ ನಿರ್ದೇಶಕ ಎನ್.ಎಂ. ತಳವಾರ ಮಾತನಾಡಿ, ರಾಜ್ಯ ಹಾಗೂ ಹೊರರಾಜ್ಯಗಳಲ್ಲಿ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸಿದ್ದರೂ, ತವರಿನ ನೆಲದಲ್ಲಿ ನಡೆದ ಈ ವಿಚಾರ ಸಂಕಿರಣ ವಿಶೇಷ ಅರ್ಥಪೂರ್ಣತೆಯನ್ನು ಪಡೆದಿದೆ ಎಂದರು.

ತಾಲೂಕು ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿ, ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಿಂದ ಆಗಮಿಸಿದ ವಿದ್ವಾಂಸರು ಮಂಡಿಸಿದ ಸಂಶೋಧನಾ ಪ್ರಬಂಧಗಳು ಪುಲಿಗೆರೆಯ ಇತಿಹಾಸ ಅಧ್ಯಯನಕ್ಕೆ ಹೊಸ ದಿಕ್ಕು ತೋರಿಸಿವೆ ಎಂದು ಹೇಳಿದರು.

ಮೂರು ದಿನಗಳ ಉಪನ್ಯಾಸಗಳಲ್ಲಿ ಭಾಗವಹಿಸಿದ್ದ ಸಾಹಿತ್ಯಾಭಿಮಾನಿಗಳ ಪರವಾಗಿ ಹಿರಿಯ ಸಾಹಿತಿಗಳಾದ ಸಿ.ಜಿ. ಹಿರೇಮಠ, ಸರೋಜಕ್ಕ ಬನ್ನೂರ, ಮಾಲಾದೇವಿ ದಂದರಗಿ, ಬಸವರಾಜ ಬಾಳೇಶ್ವರಮಠ ಹಾಗೂ ಎಸ್.ಎಫ್. ಆದಿ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ವೇದಿಕೆಯಲ್ಲಿ ವಿಶ್ರಾಂತ ಪ್ರಾಚಾರ್ಯ ಪ್ರೊ. ಎಸ್.ಎಫ್. ಶಿಗ್ಲಿ, ಜಿಲ್ಲಾ ಕಸಾಪ ಕೋಶಾಧ್ಯಕ್ಷ ಡಿ.ಎಸ್. ಬಾಪುರೆ, ದತ್ತಪ್ರಸನ್ನ ಪಾಟೀಲ ಉಪಸ್ಥಿತರಿದ್ದರು.

ಇದೇ ವೇಳೆ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕ ಪ್ರೊ. ಎನ್.ಎಂ. ತಳವಾರ, ಹಿರಿಯ ಸಂಶೋಧಕಿ ಡಾ. ಎನ್.ಎಸ್. ಅನ್ನಪೂರ್ಣ, ಕಿರಿಯ ಸಂಶೋಧಕಿ ಪವಿತ್ರ ಚಿಂತಾಮಣಿ ಹಾಗೂ ಸಿಬ್ಬಂದಿಗಳಾದ ನಾಗೇಂದ್ರ, ಗಿರೀಶ್ ಅವರನ್ನು ಸನ್ಮಾನಿಸಲಾಯಿತು.

ಶಿಕ್ಷಕ ಎಸ್.ಬಿ. ಅಣ್ಣಿಗೇರಿ ಸ್ವಾಗತಿಸಿದರು. ಈರಣ್ಣ ಗಾಣಿಗೇರ ಕಾರ್ಯಕ್ರಮ ನಿರೂಪಿಸಿದರು. ರವಿ ನೀರಲಗಿ ವಂದಿಸಿದರು.

**ತಿರುಳ್ ಕನ್ನಡ, ಸಾಹಿತ್ಯ-ಸಂಸ್ಕೃತಿಯ ಶ್ರೀಮಂತಿಕೆಗೆ ರಾಜ್ಯ ಮಟ್ಟದ ವಿಚಾರ ಸಂಕಿರಣದಲ್ಲಿ ಬೆಳಕು**

# ಪುಲಿಗೆರೆ ನೆಲ ಕನ್ನಡದ ಗತವೈಭವದ ಜೀವಂತ ಸಾಕ್ಷಿ





> "ಪ್ರಾಕೃತ ಮತ್ತು ಸಂಸ್ಕೃತ ಭಾಷೆಗಳ ಮಧ್ಯೆಯೂ ಕನ್ನಡದ ಶ್ರೇಷ್ಠತೆಯನ್ನು ಎತ್ತಿಹಿಡಿದ ನೆಲ ಪುಲಿಗೆರೆಯದು."
> **–ದೇವರಡ್ಡಿ ಹದ್ಲಿ, ಸಂಶೋಧಕ**

> "ಪುಲಿಗೆರೆ ಮುನ್ನೂರಿನ ಪ್ರತಿಯೊಂದು ಕಣವೂ ಕನ್ನಡದ ಗತವೈಭವದ ಪ್ರತೀಕವಾಗಿದೆ."
> **–ಅಮರೇಶ್ ಯತಗಲ್,** ಹಂಪಿ ಕನ್ನಡ ವಿಶ್ವವಿದ್ಯಾಲಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪುಲಿಗೆರೆ ನೆಲವು ತಿರುಳ್ ಕನ್ನಡದ ಕನ್ನಡಿಯಂತಿದ್ದು, ಕರ್ನಾಟಕದ ಚರಿತ್ರೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಅಪಾರ ಕೊಡುಗೆ ನೀಡಿದ ಐತಿಹಾಸಿಕ ತಾಣವಾಗಿದೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಶಾಸನಶಾಸ್ತ್ರ ವಿಭಾಗದ ಮುಖ್ಯಸ್ಥ ಅಮರೇಶ್ ಯತಗಲ್ ಅಭಿಪ್ರಾಯಪಟ್ಟರು.

ಪಟ್ಟಣದ ರಂಭಾಪುರಿ ಕಲ್ಯಾಣ ಮಂಟಪದಲ್ಲಿ ನಡೆದ "ಪುಲಿಗೆರೆ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯ" ಕುರಿತ ರಾಜ್ಯಮಟ್ಟದ ವಿಚಾರ ಸಂಕಿರಣದ ಮೂರನೇ ದಿನದ ಕಾರ್ಯಕ್ರಮದಲ್ಲಿ "ಪುಲಿಗೆರೆಯ ಐತಿಹಾಸಿಕ ಹಿನ್ನೆಲೆ" ಕುರಿತು ಸಂಶೋಧನಾ ಪ್ರಬಂಧ ಮಂಡಿಸಿ ಅವರು ಮಾತನಾಡಿದರು.

6ನೇ ಶತಮಾನದಿಂದ 16ನೇ ಶತಮಾನದವರೆಗೆ ಪುಲಿಗೆರೆ ತನ್ನ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಹೆಜ್ಜೆ ಗುರುತುಗಳನ್ನು ಸ್ಪಷ್ಟವಾಗಿ ಉಳಿಸಿಕೊಂಡಿದೆ ಎಂದು ಹೇಳಿದರು.

ಕದಂಬರು, ಗಂಗರು, ಬಾದಾಮಿ ಚಾಲುಕ್ಯರು, ರಾಷ್ಟ್ರಕೂಟರು, ಕಲ್ಯಾಣ ಚಾಲುಕ್ಯರು, ಹೊಯ್ಸಳರು, ಯಾದವರು ಹಾಗೂ ವಿಜಯನಗರ ಅರಸರು ಸೇರಿದಂತೆ ಅನೇಕ ರಾಜವಂಶಗಳು ಈ ನೆಲದಲ್ಲಿ ಕನ್ನಡದ ಶ್ರೀಮಂತಿಕೆಯನ್ನು ಬೆಳೆಸಿವೆ ಎಂದು ವಿವರಿಸಿದರು.

ಇದೇ ವಿಚಾರ ಸಂಕಿರಣದ ಎಂಟನೇ ಹಾಗೂ ಕೊನೆಯ ಉಪನ್ಯಾಸದಲ್ಲಿ "ಪುಲಿಗೆರೆಯ ತಿರುಳ್ ಕನ್ನಡ" ಕುರಿತು ಸಂಶೋಧಕ ದೇವರಡ್ಡಿ ಹದ್ಲಿ ಉಪನ್ಯಾಸ ನೀಡಿದರು.

ಪುಲಿಗೆರೆಯ ಕನ್ನಡವು ಕೇವಲ ತಿರುಳ್ ಕನ್ನಡ ಅಥವಾ ಕವಿರಾಜಮಾರ್ಗದ ಕನ್ನಡಕ್ಕೆ ಮಾತ್ರ ಸೀಮಿತವಾಗಿರಲಿಲ್ಲ. ಅದಕ್ಕೂ ಮೊದಲು ಕನ್ನಡದ ಭಾಷಾ ಶ್ರೀಮಂತಿಕೆ ಇಲ್ಲಿ ಬೆಳವಣಿಗೆಯಾಗಿತ್ತು ಎಂದು ಅವರು ಹೇಳಿದರು.

ಪ್ರಾಕೃತ ಹಾಗೂ ಸಂಸ್ಕೃತ ಭಾಷೆಗಳ ಪ್ರಭಾವದ ನಡುವೆಯೂ ಕನ್ನಡದ ವೈಶಿಷ್ಟ್ಯ ಹಾಗೂ ವೈಭವವನ್ನು ಉಳಿಸಿಕೊಂಡ ನೆಲ ಪುಲಿಗೆರೆಯಾಗಿತ್ತು ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಎಸ್.ಎಫ್. ಆದಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಾಲೂಕು ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ ಉಪಸ್ಥಿತರಿದ್ದರು.

ಆರಂಭದಲ್ಲಿ ಯಶವಂತ ದುರಗಣ್ಣವರ ವಚನ ಗಾಯನ ನಡೆಸಿಕೊಟ್ಟರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka